ಸಂಪುಟ 01 | ಸಂಚಿಕೆ 128 | ಗುರುವಾರ 26 ಮಾರ್ಚ್ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ ಮಾನ್ವಿ, ಅಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

1) ಪರ್ಪಲ್ ಅಪಸ್ಮಾರ ದಿನ

ಅಪಸ್ಮಾರ ಮತ್ತು ಜನರ ಜೀವನದ ಮೇಲೆ ಅದರ ಪ್ರಭಾವದ ಬಗ್ಗೆ ಜಾಗೃತಿ ಮೂಡಿಸಲು ಮಾರ್ಚ್ 26 ರಂದು ಆಚ-ರಿಸಲಾಗುತ್ತದೆ. ಈ ದಿನವು ಅಪಸ್ಮಾರದಿಂದ ಬಳಲುತ್ತಿರುವ ಜನರು ಒಬ್ಬಂಟಿಯಾಗಿಲ್ಲ ಎಂದು ನೆನಪಿಸುತ್ತದೆ

## ಸುಭಾಷಿತ

ಸೋಲು ಎಂಬುದು ಪುನಃ ಆರಂಭಿಸಲು ಸಿಕ್ಕಿರುವ ಒಂದು ಅವಕಾಶ, ಆದರೆ ಈ ಬಾರಿ ಬುದ್ಧಿವಂತಿಕೆಯಿಂದ.

– ಹೆನ್ರಿ ಫೋರ್ಡ್

# ಮೈಸೂರು ದಸರಾಕ್ಕೆ ಖರ್ಚಾದ 39 ಕೋಟಿ ರೂ.ಗಳ ಲೆಕ್ಕ ನೀಡಲು ಅಶೋಕ್ ಆಗ್ರಹ




**ಬೆಂಗಳೂರು: ನಾಡಹಬ್ಬ ಮೈಸೂರು ದಸರಾ ಮುಗಿದು 5 ತಿಂಗಳಾದರೂ 30 ಕೋಟಿಯ ಲೆಕ್ಕವಿಲ್ಲ! ಸರ್ಕಾರ ಕೂಡಲೇ ಪಾರದರ್ಶಕವಾಗಿ ಪೂರ್ಣ ಲೆಕ್ಕವನ್ನು ಸಾರ್ವಜನಿಕರ ಮುಂದಿಡಬೇಕು ಮತ್ತು ಬಾಕಿ ಇರುವ ಕಲಾವಿದರ ಸಂಭಾವನೆಯನ್ನು ತಕ್ಷಣ ಬಿಡುಗಡೆ ಮಾಡಬೇಕು ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಒತ್ತಾಯಿಸಿದ್ದಾರೆ.**

ಸರ್ಕಾರದ ವಿರುದ್ಧ ಫೀನಲ್ಲಿ ಪೋಸ್ಟ್ ಮಾಡಿರುವ ಅವರು, ವಿಶ್ವವಿಖ್ಯಾತ ಮೈಸೂರು ದಸರಾ ಮಹೋತ್ಸವ ಮುಗಿದು ಐದು ತಿಂಗಳು ಕಳೆದರೂ, ಅದಕ್ಕಾಗಿ ಖರ್ಚು ಮಾಡಿದ 30 ಕೋಟಿ ರೂಪಾಯಿಗಳ ಲೆಕ್ಕ ನೀಡಲು ಈ ಕಾಂಗ್ರೆಸ್ ಸರ್ಕಾರಕ್ಕೆ ಸಾಧ್ಯವಾಗಿಲ್ಲ ಎಂದರೆ ಇದರರ್ಥವೇನು?ಎಂದು ಪ್ರಶ್ನಿಸಿದ್ದಾರೆ. ಒಂದೆಡೆ 2026ರ ದಸರಾ ಸಿದ್ಧತೆಗಳು ಆರಂಭವಾಗುತ್ತಿವೆ, ಆದರೆ 2025ರ ದಸರಾದ ಖರ್ಚು–ವೆಚ್ಚಗಳ ಬಗ್ಗೆ ಜಿಲ್ಲಾಡಳಿತದ ಬಳಿ ಸರಿಯಾದ ಉತ್ತರವಿಲ್ಲ. ಈ ವಿಳಂಬ, ಹಿಂಜರಿಕೆ ನೋಡಿದರೆ ಭ್ರಷ್ಟಾಚಾರದ ವಾಸನೆ ಕಂಡುಬರುತ್ತಿದೆ ಎಂದು ಅನುಮಾನ ವ್ಯಕ್ತಪಡಿಸಿದ್ದಾರೆ.

ಸಿಎಂ ಸಿದ್ದರಾಮಯ್ಯ ನವರೇ,?ದಸರಾ ಹಬ್ಬದ ಲೆಕ್ಕ ಖರ್ಚು ವೆಚ್ಚದ ಕೊಡಲು ಇಷ್ಟು ಹಿಂಜರಿಕೆ ಏಕೆ? ಈ ಹಿಂದೆ ದಸರಾ ಮುಗಿದ ಒಂದೆರಡು ತಿಂಗಳಲ್ಲಿ ಲೆಕ್ಕ ನೀಡಲಾಗುತ್ತಿತ್ತು. ಈಗ 5 ತಿಂಗಳಾದರೂ ಅಧಿಕಾರಿಗಳು ಇನ್ನೂ ಲೆಕ್ಕ ಹಾಕುತ್ತಿದ್ದೇವೆ ಎಂಬ ಕುಂಟು ನೆಪ ಹೇಳುತ್ತಿರುವುದು ಯಾರನ್ನು ರಕ್ಷಿಸಲು? ಐದು ಲಕ್ಷದ ಒಪ್ಪಂದ ಮಾಡಿಕೊಂಡು ಕೇವಲ 1.95 ಲಕ್ಷ ನೀಡಿ ಕಲಾವಿದರನ್ನು ಬೀದಿಗೆ ತಳ್ಳುತ್ತಿರುವುದು ಸರಿಯೇ? ಕಲಾವಿದರ ಶ್ರಮದ ಹಣದಲ್ಲಿ ಕಮಿಷನ್ ಆಟ ನಡೆಯುತ್ತಿದೆಯೇ? ಎಂದು ತರಾಟೆಗೆ ತೆಗೆದುಕೊಂಡಿದ್ದಾರೆ.

ಸಾರ್ವಜನಿಕ ಹಣಕ್ಕೆ ಹೊಣೆಗಾ-ರಿಕೆ ಇಲ್ಲವೇ? ಜನರ ತೆರಿಗೆ ಹಣ 30 ಕೋಟಿ ರೂಪಾಯಿಗಳ ಲೆಕ್ಕವನ್ನು ಬಹಿರಂಗಪಡಿಸಲು ಸರ್ಕಾರಕ್ಕೆ ಯಾಕೆ ಭಯ? ಮೈಸೂರು ದಸರಾ ಕೇವಲ ಹಬ್ಬವಲ್ಲ, ಅದು ನಮ ನಾಡಿನ ಸಾಂಸ್ಕೃತಿಕ ಹೆಮೆ. ಅದನ್ನು ಭ್ರಷ್ಟಾಚಾರದ ಕೂಪವನ್ನಾಗಿ ಮಾಡಬೇಡಿ ಎಂದು ಎಚ್ಚರಿಸಿದ್ದಾರೆ.

ಮತ್ತೊಂದು ಪೋಸ್ಟ್ ನಲ್ಲಿ ಕಳೆದ ಅಕ್ಟೋಬರ್ ನಲ್ಲಿ ಸಕಾಲಕ್ಕೆ ವೇತನ ನೀಡದ ರಾಜ್ಯ ಕಾಂಗ್ರೆಸ್ ಸರ್ಕಾರದ ಅಮಾನವೀಯ ವ್ಯವಸ್ಥೆಗೆ ಬೇಸತ್ತು ಕಲಬುರಗಿ ಜಿಲ್ಲೆಯ ಸೇಡಂ ತಾಲ್ಲೂಕಿನ ಗ್ರಂಥಪಾಲಕಿ ಭಾಗ್ಯವತಿ ವಿಶ್ವೇಶ್ವರಯ್ಯ ಅಗ್ಗಿಮಠ ಅವರುನೇಣಿಗೆ ಶರಣಾಗಿದ್ದರು.

ಇಂತಹ ಹೃದಯವಿದ್ರಾವಕ ಘಟನೆ ನಡೆದ ಮೇಲೂ ಎಚ್ಚೆತ್ತುಕೊಳ್ಳದ ಕಾಂಗ್ರೆಸ್ ಸರ್ಕಾರ, ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿರುವ ಅರಿವು ಕೇಂದ್ರಗಳ ಗ್ರಂಥ-ಾಲಯ ಮೇಲ್ವಿಚಾರಕರಿಗೆ ಕಳೆದ 16 ತಿಂಗಳಿಂದ 5,884 ಗ್ರಂಥಪಾಲಕರಿಗೆ ಪೂರ್ಣ ವೇತನ ನೀಡದೆ ಅವರ ಕುಟುಂಬಗಳನ್ನು ಸಂಕಷ್ಟಕ್ಕೆ ದೂಡಿದೆ ಎಂದು ವಾಗ್ದಳಿ ನಡೆಸಿದ್ದಾರೆ. ಸಿಎಂ ಸಿದ್ದರಾಮಯ್ಯ ನವರೇ, ತಮ ಪಾಪರ್ ಸರ್ಕಾರದ ದಿವಾಳಿತನಕ್ಕೆ ಇನ್ನೆಷ್ಟು ಜೀವಗಳು ಬಲಿಯಾಗಬೇಕು ಸ್ವಾಮಿ? ಈ ಕೊಡಲೇ ಗ್ರಾಮ ಪಂಚಾಯಿತಿಗಳ ಗ್ರಂಥ-ಾಲಯ ಮೇಲ್ವಿಚಾರಕರಿಗೆ ಬಾಕಿ ವೇತನ ಬಿಡುಗಡೆ ಮಾಡಿ. ಇನ್ನು ಮುಂದೆ ಸಕಾಲಕ್ಕೆ ಪೂರ್ತಿ ಸಂಬಳ ಸಿಗುವಂತೆ ಕ್ರಮ ಕೈಗೊಳ್ಳಿ ಎಂಧು ಅಶೋಕ್ ಆಗ್ರಹಿಸಿದ್ದಾರೆ.

## ತಾಡಪಾಲು ಪಡೆಯಲು ಅರ್ಜಿ ಆಹ್ವಾನ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ತಾಲೂಕಿನ ವ್ಯಾಪ್ತಿಯಲ್ಲಿ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಕೃಷಿ ಸಂಸ್ಕರಣ ಘಟಕದಡಿ ತಾಡಪಾಲು ವಿತರಿಸಲು ಅರ್ಹ ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಸಾಮಾನ್ಯ ವರ್ಗದವರು ಆಧಾರ್ ಕಾರ್ಡ್, ಪಹಣಿ ಪತ್ರಿಕೆ ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದವರು ಜಾತಿ ಪ್ರಮಾಣ ಪತ್ರ ಸಮೇತ ಅರ್ಜಿ ಸಲ್ಲಿಸಬೇಕು.**

ಅರ್ಜಿ ಸಲ್ಲಿಸುವ ರೈತರು ಕಡ್ಡಾಯವಾಗಿ ಎಫ್ ಐ ಡಿ ಸಂಖ್ಯೆ ಹೊಂದಿರಬೇಕು. ಭರ್ತಿ ಮಾಡಿದ ಅರ್ಜಿಗಳನ್ನು ಏಪ್ರಿಲ್ 04ನೇಯ ತಾರೀಖಿನ ಒಳಗಾಗಿ ರೈತ ಸಂಪರ್ಕ ಕೇಂದ್ರದಲ್ಲಿ ಸಲ್ಲಿಸಬೇಕು. ಹಿಂದಿನ ಎರಡು ವರ್ಷದಲ್ಲಿ ತಾಡಪಾಲ್ ಪಡೆದವರು ಮತ್ತೆ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ. ಏಪ್ರಿಲ್ 07ನೇ ತಾರೀಕಿನಂದು ರೈತ ಸಂಪರ್ಕ ಕೇಂದ್ರದಲ್ಲಿ ಸ್ವೀಕೃತವಾದಂತಹ ಅರ್ಜಿಗಳನ್ನು ಪರಿಶೀಲಿಸಿ ಲಾಟರಿ ಪದ್ಧತಿ ಮುಖಾಂತರ ಫಲಾನುಭವಿಗಳನ್ನು ಆಯ್ಕೆ ಮಾಡಲಾಗುವುದು ಎಂದು ಕೃಷಿ ಅಧಿಕಾರಿ ಮಹೇಶ ಜೋಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನೈಜ್ಯ ದೆಸೆ ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಕೇಂದ್ರ ಸರ್ಕಾರದ ಕಾಯ್ದೆಯನ್ನು ಖಂಡಿಸಿ ಮನವಿ




ನೈಜ್ಯ ದೆಸೆ ನ್ಯೂಸ್

**ತಾಳಿಕೋಟೆ: ಪಿಂಚಣಿದಾರರು ಮತ್ತು ಕುಟುಂಬ ಪಿಂಚಣಿದಾರರಿಗೆ ಸಂಬಂಧಿಸಿದಂತೆ ಇಚೇಗೆ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮ್ ಅವರ ನಿಲುವು ಮತ್ತು ನಿರ್ಣಯವನ್ನು ವಿರೋಧಿಸಿ ಪಟ್ಟಣದ ಕರ್ನಾಟಕ ರಾಜ್ಯ ಸರ್ಕಾರಿ ನಿವೃತ್ತ ನೌಕರರ ಸಂಘ ಬೆಂಗಳೂರು ತಾಲ್ಲೂಕು ಶಾಖೆ ವತಿಯಿಂದ ತಹಶೀಲ್ದಾರ ಅವರಿಗೆ ಬುಧವಾರ ಮನವಿ ಸಲ್ಲಿಸಲಾಯಿತು.**

ಕೇಂದ್ರ ಸರ್ಕಾರವು ಸರ್ಕಾರಿ ನೌಕರರ ಹಾಗೂ ಪಿಂಚಣಿದಾರರ ವೇತನವನ್ನು ಪರಿಷ್ಕರಿಸಲು 8ನೇ ವೇತನ ಆಯೋಗವನ್ನು ರಚನೆ ಮಾಡಿದೆ. ಕೇಂದ್ರ ಆರ್ಥಿಕ ಸಚಿವೆ ನಿರ್ಮಲಾ ಸೀತಾರಾಮ್ ಅವರು ಆರ್ಥಿಕ ಬಿಲ್ಲನ್ನು ಮಂಡಿಸುವಾಗ 1.4.2026ಕ್ಕೆ ಮೊದಲು ನಿವೃತ್ತಿಯಾದ ಸರ್ಕಾರಿ ನೌಕರ-ರಿಗೆ ಪಿಂಚಣಿ ಮತ್ತು ಕುಟುಂಬ ಪಿಂಚಣಿಯನ್ನು ಪರಿಷ್ಕರಿಸಲು ಸಾಧ್ಯವಾಗುವುದಿಲ್ಲ ಎಂಬ ನಿರ್ಣಯವನ್ನು ತೆಗೆದುಕೊಳ್ಳುವುದಾಗಿ ತಿಳಿಸಿದ್ದಾರೆ.

ಇದರಿಂದ ನಿವೃತ್ತಿಯಾದ ಸರ್ಕಾರಿ ನೌಕರರು ಹಾಗೂ ಕುಟುಂಬ ಪಂಚಣಿದಾರರು ಆರ್ಥಿಕ ಸಂಕಷ್ಟಗೊಳಗಾಗುತ್ತಾರೆ ಎಂದು ತಿಳಿಸಿರುವ ಸಂಘಟನೆಯು ಶಾಂತಿಯುತವಾಗಿ ಕಪ್ಪುಪಟ್ಟಿ ಧರಿಸಿ ಸಾಂಕೇತಿ-ಕವಾಗಿ ಪ್ರತಿಭಟನೆ ಮಾಡುವ ಮುಖಾಂತರ ತಹಶೀಲ್ದಾರರವರಿಗೆ ಮನವಿ ಸಲ್ಲಿಸಿದರು.

.ಈ ಸಂದರ್ಭದಲ್ಲಿ ತಾಳಿಕೋಟೆ ತಾಲ್ಲೂಕು ಘಟಕದ ಅಧ್ಯಕ್ಷ ಸಿ.ಎಂ .ಹಿರೇಮಠ, ಉಪಾಧ್ಯಕ್ಷ ಬಿ.ಜಿ.ಚಿತಾಪುರ, ಪ್ರಧಾಮ ಕಾರ್ಯದರ್ಶಿ ಜಿ.ಎಸ್. ದೇಸಾಯಿ, ಸಂಘದ ಆಡಳಿತ ಮಂಡಳಿ ಹಾಗೂ ಸದಸ್ಯರುಗಳಾದ ಎಂ.ಬಿ.ಪತ್ತಾರ, ಎಂ.ಎಸ್. ಹುಲ್ಲೂರ, ಎಸ್.ಟಿ.ಬೊಮ್ಮನಳ್ಳಿ, ವಿ.ಎಂ.ಕೋರಿ, ಎಸ್. ಎಸ್.ಸಿಂದಗಿ, ಸಿ.ಎಸ್.ಯರಗಲ್ಲ, ಎಂ.ಬಿ.ಅಮಲ್ಯಾಳ, ವಿ.ಜಿ.ಗಣಾಚಾರಿ, ಐ.ವೈ.ವಿಜಾಪುರ, ಎಂ.ಬಿ.ಮೇಟಿ, ಎಸ್.ಎಚ್.ಬಾಗವಾನ, ಎಸ್.ಎಂ.ಸಾವರದ, ಎಸ್.ಎ.ನಮಾಜಕಟ್ಟಿ, ಎಸ್.ಎಚ್.ದೇಸಾಯಿ, ಎ.ವೈ.ವಿಜಾಪುರ,ಸಲಿಮಾ, ಆಶಾಬಿ, ಮಹಾದೇವಿ ಬಿದರಿ,ಎಲ್.ಬಿ.ಕೊಡೆಕಲ್ಲ, ಎಲ್.ವಿ.ಪಾಟೀಲ ಎಂ.ಎಚ್.ನಾವದಗಿ, ಇತರರಿದ್ದರು.

# ಎಸ್ಸೆಸ್ಸೆಲ್ಸಿಯ ದ್ವಿತೀಯ ಭಾಷೆಗೆ 664 ವಿದ್ಯಾರ್ಥಿಗಳು ಗೈರು

ನೈಜ್ಯ ದೆಸೆ ನ್ಯೂಸ್




**ರಾಯಚೂರು: ಜಿಲ್ಲೆಯಲ್ಲಿ ಮಾರ್ಚ್ 25ರ ಬುಧವಾರ ದಂದು 101 ಪರೀಕ್ಷೆ ಕೇಂದ್ರಗಳಲ್ಲಿ ನಡೆದ ದ್ವಿತೀಯ ಭಾಷೆ ವಿಷಯದಲ್ಲಿ ಒಟ್ಟು 29,926 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, 664 ವಿದ್ಯಾರ್ಥಿಗಳು ಗೈರಾಗಿದ್ದಾರೆ.**

ಜಿಲ್ಲೆಯ ದೇವದುರ್ಗ ತಾಲ್ಲೂಕಿನಲ್ಲಿ 3965 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, 79 ವಿದ್ಯಾರ್ಥಿಗಳು ಗೈರಾಗಿದ್ದಾರೆ, ಲಿಂಗಸುಗೂರು ತಾಲ್ಲೂಕಿನಲ್ಲಿ 6095 ಹಾಜರಾಗಿ 113 ವಿದ್ಯಾರ್ಥಿಗಳು ಗೈರಾಗಿದ್ದಾರೆ. ಮಾನ್ವಿ ತಾಲ್ಲೂಕಿನಲ್ಲಿ 5367 ವಿದ್ಯಾರ್ಥಿಗಳು ಹಾಜರಾಗಿ 164 ವಿದ್ಯಾರ್ಥಿಗಳು ಗೈರಾಗಿದ್ದಾರೆ. ರಾಯಚೂರು ತಾಲ್ಲೂಕಿನಲ್ಲಿ 8981 ಹಾಜರಾಗಿದ್ದು, 228 ವಿದ್ಯಾರ್ಥಿಗಳು ಗೈರಾಗಿದ್ದಾರೆ ಹಾಗೂ ಸಿಂಧನೂರು ತಾಲ್ಲೂಕಿನಲ್ಲಿ 5518 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, 88 ವಿದ್ಯಾರ್ಥಿಗಳು ಗೈರಾಗಿದ್ದಾರೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಯಚೂರು ಒಪೆಕ್ ಆಸ್ಪತ್ರೆಗೆ ಮಾನವ ಹಕ್ಕುಗಳ ಆಯೋಗ ಭೇಟಿ; ಪರಿಶೀಲನೆ

ನೈಜ್ಯ ದೆಸೆ ನ್ಯೂಸ್




**ರಾಯಚೂರು: ರಾಯಚೂರು ಪ್ರವಾಸದಲ್ಲಿ ಮಾರ್ಚ 25ರಂದು ವಿವಿಧೆಡೆ ಭೇಟಿ ಕೈಗೊಂಡ ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ಅಧ್ಯಕ್ಷರು ಹಾಗೂ ಸದಸ್ಯರು ಸಂಜೆ 6 ಗಂಟೆ ವೇಳೆಗೆ ನಗರದ ರಾಜೀವಗಾಂಧಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗೆ ತೆರಳಿ ಆಸ್ಪತ್ರೆಯಲ್ಲಿನ ಸೌಕರ್ಯಗಳ ಬಗ್ಗೆ ಖುದ್ದು ಪರಿಶೀಲಿಸಿ ಮಾಹಿತಿ ಪಡೆದುಕೊಂಡರು.**

ಆಸ್ಪತ್ರೆ ಪ್ರವೇಶದ ವೇಳೆ, ಒಬ್ಬ ರೋಗಿಯು ಟ್ರಾಲಿ ಮೇಲೆ, ಮತ್ತೊಬ್ಬರು ನೆಲದ ಮೇಲೆ ಮಲಗಿರುವುದನ್ನು ಅಧ್ಯಕ್ಷರು ಹಾಗೂ ಸದಸ್ಯರು ನೋಡಿ, ರೋಗಿಗಳ ಅಹವಾಲು ಆಲಿಸಿದರು. ನಾವು ನೆನ್ನೆಯೇ ಬಂದಿದ್ದೇವೆ. ಇದುವರೆಗೆ ಬೆಡ್ ನೀಡಿಲ್ಲ. ಮರುದಿನ ಬೆಳಗ್ಗೆ ರಕ್ತ ಪರೀಕ್ಷೆ ಮಾಡಿದ್ದಾರೆ ಎಂದು ರೋಗಿಯೊಬ್ಬರು ತಿಳಿಸಿದರು.

ಇದುವರೆಗೆ ಯಾಕೆ ಬೆಡ್ ನೀಡಿಲ್ಲ? ಈ ರೀತಿ ನಿರ್ಲಕ್ಷ್ಯ ಮಾಡಬೇಡಿ ಎಂದು ವೈದ್ಯರ ಕಾರ್ಯವೈಖರಿಗೆ ಅಧ್ಯಕ್ಷರು ಅಸಮಾಧಾನ ವ್ಯಕ್ತಪಡಿಸಿದರು.ರಿಮ್ಸ್ ನಿರ್ದೇಶಕರಾದ ಡಾ.ರಮೇಶ, ಒಪೆಕ್ ಆಸ್ಪತ್ರೆಯ ವಿಶೇಷಾಧಿಕಾರಿ ಡಾ.ರಮೇಶ ಸಾಗರ್ ಅವರು ಆಗಮಿಸಿ ಆಯೋಗಕ್ಕೆ ಮಾಹಿತಿ ನೀಡಿದರು. ಈ ವೇಳೆ ಡಾ.ಮುರಳೀರಾವ್, ಡಾ.ಗೋಪಿನಾಥ, ಡಾ.ಮಂಜುನಾಥ ಹಟ್ಟಿ, ಡಾ.ವೀರೇಶ ಇದ್ದರು.

# ಹೌದು ಜನರ ಶಕ್ತಿಯೊಂದಿಗೆ ಭಾರತದಲ್ಲಿ ಕ್ಷಯರೋಗ ನಿರ್ಮೂಲನೆ ಮಾಡಬಹುದು

ನೈಜ್ಯ ದೆಸೆ ನ್ಯೂಸ್




**ಸಿಂಧನೂರು: ಜಿಲ್ಲಾಡಳಿತ ಜಿಲ್ಲಾ ಪಂಚಾಯತ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು ಪ್ರಾಥಮಿಕ ಆರೋಗ್ಯ ಕೇಂದ್ರ ಜವಳಗೇರಾ ಇವರ ಸಂಯುಕ್ತ ಆಶ್ರಯದಲ್ಲಿ ಸಮುದಾಯದಲ್ಲಿ ಕ್ಷಯರೋಗ ದಿನಾಚರಣೆ ಅರಗಿನ ಮರದ ಕ್ಯಾಂಪ್ ನಲ್ಲಿ ಆಚರಿಸಲಾಯಿತು.**

ಕಾರ್ಯಕ್ರಮದಲ್ಲಿ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ ಅವರು ಮಾತನಾಡಿ ಪ್ರತಿ ವರ್ಷದಂತೆ ಮಾರ್ಚ್ 24 ರಂದು ಕ್ಷಯರೋಗ ದಿನಾಚರಣೆ ಆಚರಣೆ ಮಾಡಲಾಗುತ್ತದೆ ಡಾಕ್ಟರ ರಾಬರ್ಟ್ ಕೋಚ್ ಎಂಬ ವಿಜ್ಞಾನಿ ಕ್ಷಯ ರೋಗ ಮೈಕೊಬ್ಯಾಟೀರಿಯಂದಿಂದ ಹರಡುತ್ತತ್ತದೆ ಎಂದು ತಿಳಿಸಿದರು. .ಕ್ಷಯರೋಗ ಹರಡದಂತೆ ಸಮುದಾಯದ ಸಹಭಾಗಿತ್ವ ಜನರಲ್ಲಿ ಜಾಗೃತಿ ಮೂಡಿಸುವ ಕಾರ್ಯ ಮಹತ್ವದ್ದಾಗಿದೆ ಕ್ಷಯರೋಗ ರೋಗದ ಲಕ್ಷಣಗಳು ಕಂಡು ಬಂದರೆ ಕೂಡಲೇ ಪರೀಕ್ಷೆ ಮಾಡಿಸಿಕೊಳ್ಳಬೇಕು ಕ್ಷಯರೋಗದ ಲಕ್ಷಣಗಳಾದ ಎರಡು ವಾರದ ಹೆಚ್ಚಿನ ಕೆಮ್ಮು ಕಫದಲಿ ರಕ್ತ ಬರುವುದು ಹಸಿವಿಲ್ಲದೆ ಇರುವುದು ದೇಹದ ತೂಕ ಕಡಿಮೆಯಾಗುವುದೂ ರಾತ್ರಿ ವೇಳೆ ಅತಿಯಾದ ಜ್ವರ ಮತ್ತು ಬೆವರುವುದು ಕ್ಷಯರೋಗದ ಲಕ್ಷಣವಾಗಿ ರುತ್ತದೆ ಇಂತಹ ಲಕ್ಷಣಗಳು ಕಂಡು ಬಂದರೆ ಕೂಡಲೇ ಹತ್ತಿರದ ಆಸ್ಪತ್ರೆಯಲ್ಲಿ ಪರೀಕ್ಷೆ ಮಾಡಿಸಿಕೊಳ್ಳಿ ಎಂದರು.

ನಂತರ ಮಾತನಾಡಿದ ಪ್ರಾಥ-'ಮಿಕ ಆರೋಗ್ಯ ಸುರಕ್ಷಾ ಅಧಿಕಾರಿಗಳು ನಿಂಗಮ್ಮ ಕ್ಷಯರೋಗ ರೋಗ ನಿರೋಧಕ ಶಕ್ತಿ ಕಡಿಮೆ ಇರುವ ವ್ಯಕ್ತಿಗಳಲ್ಲಿ ಬರುವ ಸಾಧ್ಯತೆ ಹೆಚ್ಚು ಹೆಚ್ .ಐ.ವಿ. ಪೀಡಿತರಿಗೆ ಕ್ಷಯರೋಗ ಹರಡುವ ಸಾಧ್ಯತೆ ಇದೆ. ಅಪೌಷ್ಟಿಕತೆಯಿಂದ ಬಳಲುತ್ತಿರುವವರು ಹೆಚ್ಚಾಗಿ ಕ್ಷಯರೋಗಕ್ಕೆ ತುತ್ತಾಗಬಹುದು. ಸಂಪೂರ್ಣ ಚಿಕಿತ್ಸೆಯಿಂದ ಕ್ಷಯರೋಗ ಬೇಗನೆ ಗುಣಪಡಿಸಬಹುದು.

ಸಮುದಾಯದಲ್ಲಿ ಜನರಲ್ಲಿ ಆರೋಗ್ಯ ಶಿಕ್ಷಣ ಮತ್ತು ಜಾಗೃತಿ ಮೂಡಿಸುವ ಮೂಲಕ ಕ್ಷಯರೋಗ ನಿರ್ಮೂಲನೆ ಮಾಡಬಹುದು ಕೆಮ್ಮುವಾಗ ಮಾಸ್ಕ್ ಧರಿಸಿ ಎದೆಯಲ್ಲಿ ನೋವೂ ಮತ್ತು ಅಸ್ವಸ್ಥತೆಯ ಕಂಡುಬಂದರೆ ಕೊಡಲೆ ಪರೀಕ್ಷೆ ಮಾಡಿಕೊಂಡು ಸ್ವಲ್ಪ ನಿಂತು ಓದಿ ಯೋಚಿಸಿ ಕ್ಷಯರೋಗದ ಲಕ್ಷಣಗಳು ಕಂಡು ಬಂದರೆ ಕೂಡಲೇ ಪರೀಕ್ಷೆ ಮಾಡಿಸಿಕೊಳ್ಳಿ ಸೂಕ್ತ ಚಿಕಿತ್ಸೆಯಿಂದ ಸಂಪೂರ್ಣ ಗುಣವಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ವಿಜಯಲಕ್ಷ್ಮಿ ಅಂಗನವಾಡಿ ಮೇಲ್ವಿಚಾರಕರು. ಅಂಗನವಾಡಿ ಕಾರ್ಯಕರ್ತೆಯರು ಪ್ರಾಥಮಿಕ ಆರೋಗ್ಯ ಸುರಕ್ಷಾ ಅಧಿಕಾರಿಗಳು ರಾಧಾ. ಆಶಾ ಕಾರ್ಯಕರ್ತೆರಾದ ಲಕ್ಷ್ಮಿ. ಮಹೇಶ್ವರಿ. ಅಂಗನವಾಡಿ ಕಾರ್ಯಕರ್ತೆಯರಾದ ಆದಿಲಕ್ಷ್ಮೀ. ವಿಜಯಲಕ್ಷ್ಮಿ .ರೂಪಾ. ಬಸವಂತಮ್ಮ. ಸಾರ್ವಜನಿಕರು ಹಾಗೂ ಮಕ್ಕಳ ತಾಯಿಂದಿರು ಉಪಸ್ಥಿತರಿದ್ದರು.

## ಸಾಹಿತ್ಯ ಸಿಂಚನ

ಹೋರಾಟ.!

ಕತ್ತಲು ಬಯಸುವವರಿಗೆ
ಇರುಳೇ ಬೇಕೆಂದೇನಿಲ್ಲ..
ಮನೆಯ ಕಿಟಕಿ ಬಾಗಿಲುಗಳ
ಮುಚ್ಚಿ ಪರದೆಯೆಳೆದರೆ ಸಾಕು.!
ದೀಪಗಳನೆಲ್ಲ ನಂದಿಸಿದರೆ ಸಾಕು.!

ಕಂಗಳಿಗೊಂದು ಕಪ್ಪುಪಟ್ಟಿ
ಕಟ್ಟಿಕೊಂಡು ಕುಳಿತರೂ ಸಾಕು.!
ಹೊದ್ದಿಕೆಯಲಿ ಹುದುಗಿಕೊಂಡು
ಕಣ್ಮುಚ್ಚಿ ಮಲಗಿದರೂ ಸಾಕು.!
ತಮವ ಬಿಗಿದಪ್ಪಿಕೊಂಡರೆ ಸಾಕು.!

ಬೆಳಕು ಬೇಕೆನ್ನುವವರು ಮಾತ್ರ..
ಬತ್ತಿ ಹೊಸೆಯಬೇಕು,
ತೈಲ ಸುರಿಯಬೇಕು,
ಕಡ್ಡಿ ಗೀರಲೇಬೇಕು
ಹಣತೆ ಹಚ್ಚಲೇಬೇಕು.!

ರಾತ್ರಿಯೆಲ್ಲ ಅಡಿಗಡಿಗೂ
ಕತ್ತಲೊಂದಿಗೆ ಸೆಣಸಲೇಬೇಕು.!
ಹಚ್ಚಿದ ಹಣತೆ ಗಾಳಿಗಾರದಂತೆ
ಎಡಬಿಡದೆ ಕಾಪಿಡಲೇಬೇಕು.!
ನಂದದಂತೆ ನೋಡುತ್ತ ಕೂರಲೇಬೇಕು.!

ಮೂಡಣದಿ ರವಿ ಮೂಡುವವರೆಗೆ
ಇರುಳೆಲ್ಲ ಸಹನೆಯಲಿ ಕಾಯಲೇಬೇಕು
ತಪಿಸಲೇಬೇಕು ಪರಿತಪಿಸಲೇಬೇಕು
ಬೆಳಕಿನ ಮಂತ್ರ ಜಪಿಸಲೇಬೇಕು
ಬೆಳಕಿಗಾಗಿ ಕತ್ತಲಯುದ್ಧ ಗೆಲ್ಲಲೇಬೇಕು.!

ಎ.ಎನ್.ರಮೇಶ್. ಗುಬ್ಬಿ.

# ಶ್ರೀ ಬಸವಶ್ರೀ ನೌಕರರ ಪತ್ತಿನ ಸಹಕಾರ ಸಂಘದಿಂದ ಸಾರ್ವಜನಿಕರಿಗೆ ಶುದ್ಧ ಕುಡಿಯುವ ನೀರಿನ ಅರವಟಿಗೆ ಉದ್ಘಾಟನೆ

ನೈಜ್ಯ ದೆಸೆ ನ್ಯೂಸ್




**ಸಿಂಧನೂರು: ಬೇಸಿಗೆಯ ತೀವ್ರ ಬಿಸಿಲಿನ ಹಿನ್ನೆಲೆ ಪ್ರತಿ ವರ್ಷದಂತೆ ಈ ವರ್ಷವು ಕೂಡ ಸಾರ್ವಜನಿಕರ ದಾಹ ನೀಗಿಸುವ ಉದ್ದೇಶದಿಂದ, ಶ್ರೀ ಬಸವಶ್ರೀ ನೌಕರರ ಪತ್ತಿನ ಸಹಕಾರ ಸಂಘ ನಿಯಮಿತ, ಮಾನವಿ ಸಿಂಧನೂರು ಶಾಖೆಯ ವತಿಯಿಂದ ಸಿಂಧನೂರು ನಗರದ ಬಸ್ ನಿಲ್ದಾಣದಲ್ಲಿ ಶುದ್ಧ ಕುಡಿಯುವ ನೀರಿನ ಅರವಟಿಗೆಯನ್ನು ಪ್ರಾರಂಭಿಸಲಾಯಿತು.**

ಸಂಘದ ಸಂಸ್ಥಾಪಕ ಅಧ್ಯಕ್ಷರಾದ ಶ್ರೀ ಡಾ|| ಶಂಕರಗೌಡ ಎಸ್. ಪಾಟೀಲ್ ಅವರ ಮಾರ್ಗದರ್ಶನದಲ್ಲಿ, ನೆರವೇರಿತು ಸಂಘದ ಮುಖ್ಯ ಕಾರ್ಯನಿರ್ವಹಣಾಧಿಕಾ–ರಿಗಳಾದ ವೀರೇಶ ಎನ್. ಹೊಸೂರ್ ಅವರು ಮಾತನಾಡಿ ವರ್ಷ ದಿಂದ ವರ್ಷಕ್ಕೆ ಬಿಸಿಲಿನ ತಾಪ ಮಾರ್ಚ್ ತಿಂಗಳಿಂದ ಹೆಚ್ಚಾಗುವದರಿಂದ ಪಟ್ಟಣಕ್ಕೆ ಬರುವ ಸಾವಿರಾರು ಪ್ರಯಾಣಿಕರು ಮತ್ತು ಸಾರ್ವಜನಿಕರಿಗೆ ಹಳ್ಳಿಗರ ನೀರಿನ ದಾಹ ತಣಿಸಲು ಸಹಕಾರಿಯಾಗಿದೆ ಎಂದರು.

ನಮ್ಮ ಸಂಸ್ಥೆಯ ಶಾಖೆಗಳಾದ ಮಾನವಿ ಲಿಂಗಸಗೂರು,ಸಿರವಾರ,ದೇವದುರ್ಗ ,ರಾಯಚೂರು, ಗಂಗಾವತಿ,ಕೊಪ್ಪಳ,ಹುಣಸಗಿ ಹಾಗೂ ಯಾದಗಿರಿ ನಗರಗಳಲ್ಲಿ ದಿನ ಆಗಮಿಸುವ ಸಾರ್ವಜನಿಕರಿಗೆ ಶುದ್ಧ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಲಾಗಿದೆ ಎಂದರು. ಸಿಂಧನೂರು ನಗರದ ನಿವೃತ್ತ ನೌಕರರ ಸಂಘದ ಕಾರ್ಯದರ್ಶಿಗಳಾದ ಶ್ರೀ ವೆಂಕಟರೆಡ್ಡಿ ಅವರು ಅರವಟಿಗೆಯನ್ನು ಉದ್ಘಾಟಿಸಿ, ಸಂಘದ ಈ ಸಾಮಾಜಿ–ಕ ಕಾರ್ಯಕ್ರಮಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು ಈ ಸಂದರ್ಭದಲ್ಲಿ ಪ್ರಮುಖರಾದ ತಿಮ್ಮಾರೆಡ್ಡಿ, ಚಂದ್ರಪ್ಪ, ಈಶ್ವರಪ್ಪ,ಶೌಕತಲಿ ಖಾನ್, ಜಡೇಶ, ನಿಂಗಪ್ಪ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಸಿಂಧನೂರು ಶಾಖಾ ವ್ಯವಸ್ಥಾಪಕರಾದ ಸೂಗನಗೌಡ ಚೀಕಲಪರ್ವಿ ಹಾಗೂ ಸಂಘದ ಸಿಬ್ಬಂದಿ ವರ್ಗದವರು ಭಾಗವಹಿಸಿ, ಸಾರ್ವಜನಿಕ ಸೇವೆಗೆ ಚಾಲನೆ ನೀಡಿದರು. ಬೇಸಿಗೆಯ ಅವಧಿಯಲ್ಲಿ ಸಾರ್ವಜನಿಕರು ಈ ಸೌಲಭ್ಯವನ್ನು ಸದುಪಯೋಗಪಡಿಸಿ ಕೊಳ್ಳಬೇಕೆಂದು ಮನವಿ ಮಾಡಲಾಗಿದೆ.

# ಮಾರ್ಚ್ 26ರಿಂದ ಅಂತರ್ ಮಹಾವಿದ್ಯಾಲಯಗಳ ಕ್ರೀಡಾಕೂಟ




ನೈಜ್ಯ ದೆಸೆ ನ್ಯೂಸ್

**ರಾಯಚೂರು: ಇಲ್ಲಿನ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ 16ನೇ ಅಂತರ್ ಮಹಾವಿದ್ಯಾಲಯಗಳ ಕ್ರೀಡಾಕೂಟಗಳು ಇದೇ ಮಾರ್ಚ್ 26 ರಿಂದ 28 ರವರೆಗೆ ಕೃಷಿ ವಿವಿಯ ಆವರಣದಲ್ಲಿ ಜರುಗಲಿದೆ.**

ಈ ಕ್ರೀಡಾ ಕೂಟದಲ್ಲಿ ಪುರುಷ ಮತ್ತು ಮಹಿಳೆಯರ 100ಮೀಟರ್ ಓಟ, 200 ಮೀಟರ್ ಓಟ, 5000 ಮೀಟರ್ ಓಟ, 10,000ಮೀಟರ್ ಓಟ, ಜೊತೆಗೆ ಪೋಲ್ ವಾಲ್ಟ್, ಜಾವೆಲಿನ್ ಎಸೆತ, 4*400 ರಿಲೇ ಓಟಗಳು ನಡೆಯಲಿದ್ದು. ಇದರಲ್ಲಿ ಒಟ್ಟು 70 ವಿದ್ಯಾರ್ಥಿನಿಯರನ್ನೊಳಗೊಂಡಂತೆ ಒಟ್ಟು 125 ವಿದ್ಯಾರ್ಥಿಗಳು ಭಾಗವಹಿಸುವರು. ಈ ಕ್ರೀಡಾ ಕೂಟದಲ್ಲಿ ಕೃಷಿ ಮಹಾವಿದ್ಯಾಲಯ ರಾಯಚೂರು, ಕೃಷಿ ತಾಂತ್ರಿಕ ಮಹಾವಿದ್ಯಾಲಯ ರಾಯಚೂರು, ಕೃಷಿ ಮಹಾವಿದ್ಯಾಲಯ ಭೀಮರಾಯನಗುಡಿ, ಕೃಷಿ ಮಹಾವಿದ್ಯಾಲಯ ಕಲಬುರಗಿ, ಕೃಷಿ ಮಹಾವಿದ್ಯಾಲಯ ಗಂಗಾವತಿ ಹಾಗೂ ಕೃಷಿ ಮಹಾವಿದ್ಯಾಲಯ ಹಗರಿ, ಗಳು ಭಾಗವಹಿಸಲಿವೆ.

ಕ್ರೀಡಾಕೂಟಕ್ಕೆ ವಿಶ್ವವಿದ್ಯಾಲಯದ ಗೌರವಾನ್ವಿತ ಕುಲಪತಿಗಳಾದ ಡಾ. ಎಂ. ಹನುಮಂತಪ್ಪ ಅವರು ಚಾಲನೆ ನೀಡಲಿದ್ದಾರೆ. ಮುಖ್ಯ ಅತಿಥಿಗಳಾಗಿ ಮಾನ್ಯ ವಿಧಾನ ಪರಿಷತ್ ಸದಸ್ಯರು ಹಾಗೂ ಗೌರವಾನ್ವಿತ ವ್ಯವಸ್ಥಾಪನಾ ಮಂಡಳಿಯ ಸದಸ್ಯರಾದ ಶರಣಗೌಡ ಪಾಟೀಲ್ ಬಯ್ಯಾಪುರ ಅವರು ಭಾಗವಹಿಸಲಿದ್ದಾರೆ. ಗೌರವಾನ್ವಿತ ವ್ಯವಸ್ಥಾಪನಾ ಮಂಡಳಿಯ ಸದಸ್ಯರುಗಳಾದ ಬಸನಗೌಡ ಬ್ಯಾಗವಟ್, ಮಲ್ಲಿಕಾರ್ಜುನ ಡಿ., ಮಲ್ಲೇಶ ಕೊಲಿಮಿ, ಮಧುಸೂದನ್ ರೆಡ್ಡಿ, ತಿಮ್ಮಣ್ಣ ಸೋಮಪ್ಪ ಚಾವಡಿ ಹಾಗೂ ವಿಶ್ವವಿದ್ಯಾಲಯದ ಎಲ್ಲಾ ಅಧಿಕಾರಿವೃಂದ ಕೂಡ ಉಪಸ್ಥಿತರಿರುವರು ಎಂದು ದೈಹಿಕ ಶಿಕ್ಷಣ ವಿಭಾಗದ ಮುಖ್ಯಸ್ಥರಾದ ಡಾ.ರಾಜಣ್ಣ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾಂಗ್ರೇಸ್ ಮುಖಂಡ ಎಂ ಶ್ರೀಕಾಂತ್ ಅವರ ಹುಟ್ಟುಹಬ್ಬ ಆಚರಣೆ

ನೈಜ್ಯ ದೆಸೆ ನ್ಯೂಸ್

**ಬೆಂಗಳೂರು :ಸಮಾಜ ಸೇವಕರು ಹಾಗೂ ಶಿವಮೊಗ್ಗ ಬಿಡಿಸಿಸಿ ಬ್ಯಾಂಕ್ ನಿರ್ದೇಶಕರಾದ ಎಂ ಕಾಂತರಾಜು ಅವರ ಹುಟ್ಟು ಹಬ್ಬವನ್ನು ಅವರ ಅಭಿಮಾನಿ ಬಳಗದ ವತಿಯಿಂದ ಆಚರಿಸಲಾಯಿತು.**



ಎಂ ಶ್ರೀಕಾಂತ್ ಅಭಿಮಾನಿ ಬಳಗ ಪಟಾಕಿ ಸಿಡಿಸಿ ಮೈಸೂರು ಪೇಟ ತೊಡಿಸಿ ಬೃಹತ್ ಹೂವಿನ ಹಾರ ಹಾಕುವ ಮೂಲಕ ತಮ್ಮ ನಾಯಕನಿಗೆ ಹೂ ಮಳೆ ಸುರಿಸಿ ಮುಂದಿನ ದಿನಗಳಲ್ಲಿ ಶಿವಮೊಗ್ಗದಲ್ಲಿ ಶಾಸಕರಾಗಲಿ ಎಂದು ಶುಭ ಹಾರೈಸುವ ಮೂಲಕ ಹುಟ್ಟಹಬ್ಬ ಆಚರಿಸಲಾಯಿತು.

## ಗ್ರಾಮೀಣ ಭಾಗದಲ್ಲಿ ಮಾರ್ಚ್ 29ರಂದು ವಿದ್ಯುತ್ ವ್ಯತ್ಯಯ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ವ್ಯಾಪ್ತಿಗೆ ಬರುವ 110/11 ಕೆವಿ ಮಲಿಯಾಬಾದ ವಿದ್ಯುತ್ ಉಪ ಕೇಂದ್ರದಲ್ಲಿ ನಾಲ್ಕನೇಯ ತ್ರೈಮಾಸಿಕ ನಿರ್ವಹಣೆ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ಮಾರ್ಚ್ 29ರ ಬೆಳಿಗ್ಗೆ 10 ಗಂಟೆಯಿಂದ ಸಾಯಂಕಾಲ 05 ಗಂಟೆವರೆಗೆ ಮಲಿಯಾಬಾದ ವಿದ್ಯುತ್ ಉಪ–ಕೇಂದ್ರದ ವ್ಯಾಪ್ತಿಯಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.**

# ಭವಿಷ್ಯದಲ್ಲಿ ಗರ್ಭಕಂಠದ ಕ್ಯಾನ್ಸರ್ ಬರದಂತೆ ತಡೆಯಲು, 14 ವರ್ಷದ ಹೆಣ್ಣು ಮಕ್ಕಳಿಗೆ ಹೆಚ್‌ಪಿಇ ಲಸಿಕೆ ಹಾಕಿಸಲು ಪಾಲಕರು ಹಿಂಜರಿಯಬೇಡಿ: ತಹಶೀಲ್ದಾರ ಸುರೇಶ ವರ್ಮಾ

ನೈಜ್ಯ ದೆಸೆ ನ್ಯೂಸ್




**ರಾಯಚೂರು: ಸರಕಾರದ ಮಹತ್ವಾಕಾಂಕ್ಷಿ ಅಭಿಯಾನವಾದ ಭವಿಷ್ಯದಲ್ಲಿ ಹೆಣ್ಣು ಮಕ್ಕಳು ಗರ್ಭಕಂಠದ ಕ್ಯಾನ್ಸರ್‌ನಿಂದ ಬಳಲಬಾರದು, ಸಂತಸದ ಜೀವನಕ್ಕಾಗಿ ಪ್ರಸ್ತುತ 14 ವರ್ಷದ ಹೆಣ್ಣು ಮಕ್ಕಳಿಗೆ ಉಚಿತವಾಗಿ ಹಾಕಲಾಗುವ ಹೆಚ್.ಪಿ.ವಿ ಲಸಿಕೆಯನ್ನು ಪಾಲಕರು ಯಾವುದೆ ಹಿಂದೇಟು ಹಾಕದೆ, ಲಸಿಕೆ ಬಗ್ಗೆ ತಪ್ಪು ಸುದ್ದಿಗಳಿಗೆ ಕಿವಿಗೊಡದೆ ಲಸಿಕೆ ಹಾಕಿಸಲು ಎಲ್ಲರೂ ಮುಂದೆ ಬರಬೇಕು, ಇದಕ್ಕಾಗಿ ಆರೋಗ್ಯ ಇಲಾಖೆಯೊಂದಿಗೆ ಶಿಕ್ಷಣ ಇಲಾಖೆ, ವಸತಿ ನಿಲಯಗಳನ್ನು ಹೊಂದಿರುವ ವಿವಿಧ ಕಲ್ಯಾಣ ಇಲಾಖೆಗಳು ಕೈಜೊಡಿಸಲು ರಾಯಚೂರು ತಹಶೀಲ್ದಾರ ಸುರೇಶ ವರ್ಮಾ ತಿಳಿಸಿದರು.**

ರಾಯಚೂರು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ತಾಲೂಕಾ ಆಡಳಿತ, ಸಾರ್ವಜನಿಕ ಶಿಕ್ಷಣ ಇಲಾಖೆ, ತಾಲೂಕಾ ಆರೋಗ್ಯಾಧಿಕಾರಿಗಳ ಕಛೇರಿ ಮೂಲಕ ಡಿಹೆಚ್‌ಓ ಕಾರ್ಯಾಲಯದ ತುಂಗಾ ಭವನದಲ್ಲಿ ಜರುಗಿದ ಹೆಚ್‌ಪಿವಿ ಲಸಿಕೆ ವಿಶೇಷ ಸಭೆಯಲ್ಲಿ ಮಾತನಾಡಿ, ಯಾವುದೇ ಸರಕಾರ ಜನತೆಗೆ ಉತ್ತಮವಾದ, ದೀರ್ಘಾವಧಿಯಲ್ಲಿ ಸಮಾಜಕ್ಕೆ ಒಳ್ಳೆಯದಾಗುವ ಯೋಜನೆ ರೂಪಿಸುತ್ತವೆ, ಅದರಂತೆ ಪ್ರಸುತ್ತ 14 ವರ್ಷದ ಶಾಲಾ ಮಕ್ಕಳಿಗೆ ಹೆಚ್‌ಪಿವಿ ಲಸಿಕೆ ಹಾಕುವ ಉದ್ದೇಶವು, ಭವಿಷ್ಯದಲ್ಲಿ ಗರ್ಭಕಂಠದ ಕ್ಯಾನ್ಸರ್ ತಡೆಗಟ್ಟುವದಾಗಿದೆ. ಆದ್ದರಿಂದ ಶಾಲೆ, ಬಾಲಕಿಯರ ವಸತಿ ನಿಲಯಗಳಲ್ಲಿ ಈ ಕುರಿತು ಲಸಿಕೆ ವಂಚಿತರಿಗಾಗುವ ಗಂಭೀರ ಸಮಸ್ಯೆಗಳ ಬಗ್ಗೆ ತಿಳಿಸಿ, ಸೂಕ್ತ ಕ್ರಿಯಾ ಯೋಜನೆ ರೂಪಿಸಿ ಕಾಲಮಿತಿಯಲ್ಲಿ ಅರ್ಹರಾದ ಎಲ್ಲ ಹೆಣ್ಣು ಮಕ್ಕಳಿಗೆ ಲಸಿಕೆ ಹಾಕಲು ತಿಳಿಸಿದರು.

ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ ನಂದೀತಾ ಎಮ್ ಎನ್ ಸಭೆಗೆ ಮಾಹಿತಿ ನೀಡಿ, ಗ್ರಾಮೀಣ ಪ್ರದೇಶದಲ್ಲಿ ಅಡೆತಡೆ ಇಲ್ಲ, ಆದರೆ ನಗರ ಪ್ರದೇಶದ ಕೆಲವು ಪ್ರದೇಶಗಳಲ್ಲಿ ಪ್ರಗತಿ ನಿಧಾನವಾಗುತ್ತಿದ್ದು, ಅಂತ ಪ್ರದೇಶದ ಜನರಿಗೆ ಹಾಗೂ ಇತರ–ರಿಗೂ ವ್ಯಾಪಕ ಪ್ರಚಾರವನ್ನು ನೀಡಲು ಧಾರ್ಮಿಕ ಮುಖಂಡರ, ಧರ್ಮ ಗುರುಗಳ ಸಹಾಯದೊಂದಿಗೆ ವಿಡಿಯೋ ಸಂದೇಶಗಳನ್ನು ಸಾಮಾಜಿಕ ಜಾಲತಾಣಗಳ ಮೂಲಕ ನೀಡಲು ಕ್ರಮ ವಹಿಸಲಾಗುತ್ತಿದ್ದು, ತ್ಯಾಜ್ಯ ವಿಲೇವಾರಿ ವಾಹನಗಳಲ್ಲಿ ಜಿಂಗಲ್ಸ್ ಹಾಕಲಾಗುತ್ತಿದೆ, ದಯವಿಟ್ಟು ಗರ್ಭಕಂಠದ ಕ್ಯಾನ್ಸರ್ ತಡೆಗೆ ಈ ಲಸಿಕೆ ಅತ್ಯಂತ ಉಪಯುಕ್ತವಾಗಿದೆ.

ಮಾರುಕಟ್ಟೆಯಲ್ಲಿ ದೊರಕುವ ಲಸಿಕೆಯನ್ನು ಖಾಸಗಿ ಆಸ್ಪತ್ರೆಗಳಲ್ಲಿ ದುಬಾರಿ ಹಣ ಪಾವತಿಸಿ ಸ್ವಯಂವಾಗಿ ಲಸಿಕೆ ಹಾಕಿಸುತ್ತಿದ್ದಾರೆ. ಆದ್ದರಿಂದ ಸರಕಾರವೇ ಉಚಿತವಾಗಿ ಹಾಕುತ್ತಿರುವ ವ್ಯವಸ್ಥೆ ಕಲ್ಪಿಸಿದ್ದು, ಅನಗತ್ಯ ತಪ್ಪು ಮಾಹಿತಿಗಳಿಗೆ ಕಿವಿಗೊಡದೆ, 14 ವರ್ಷದ ಹೆಣ್ಣು ಮಕ್ಕಳಿಗೆ ಉಚಿತ ಹೆಚ್.ಪಿ.ವಿ (ಹೂಮನ್ ಪ್ಯಾಪಿಲೋಮ ವೈರಸ್) ವಿರುದ್ಧದ ಲಸಿಕೆಯನ್ನು ಪೋಷಕರು ತಾವಾಗಿಯೇ ತಮ್ಮ ಮಕ್ಕಳಿಗೆ ತಪ್ಪದೇ ಹತ್ತಿರದ ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಬಂದು ಲಸಿಕೆ ಹಾಕಿಸಲು ಮುಂದೆ ಬರಲು ಎಲ್ಲರ ಸಹಕಾರಕ್ಕಾಗಿ ತಿಳಿಸಿದರು.

ಗರ್ಭಕಂಠದ ಕ್ಯಾನ್ಸರ್‌ಗೆ ಕಾರಣಗಳು: ಸಾಮಾನ್ಯವಾಗಿ ವೈಯಕ್ತಿಕ ಶುಚಿತ್ವ, ಜನನಾಂಗಗಳಲ್ಲಿ ತೊಂದರೆ, ಹುಣ್ಣು, ಅಸುರಕ್ಷಿತ ಲೈಂಗಿಕ ಸಂಪರ್ಕದಿಂದ ಹರಡುವ ಹೂಮನ್ ಪ್ಯಾಪಿಲೋಮ ವೈರಸ್ (ಹೆಚ್.ಪಿ.ವಿ) ಸೋಂಕು ಕ್ರಮೇಣ ಗರ್ಭಕಂಠದ ಜೀವಕೋಶಗಳಲ್ಲಿ ಬದಲಾವಣೆಗಳಾಗಿ ಕ್ಯಾನ್ಸರ್ ಆಗಿ ಬದಲಾಗುತ್ತದೆ. ಈ ಹಿನ್ನಲೆಯಲ್ಲಿ ಮಾರಕವಾಗುವುದನ್ನು ತಡೆಯಲು ಹೆಚ್.ಪಿ.ವಿ ಲಸಿಕೆಯು ಸೂಕ್ತವಾಗಿದೆ. ಈ ಸಂದರ್ಭದಲ್ಲಿ ತಾಲೂಕಾ ಆರೋಗ್ಯಾಧಿಕಾರಿ ಡಾ ಅಮೃತ ಹುಕ್ಕೇರಿ, ಶಿಕ್ಷಣ ಇಲಾಖೆಯ ಬಿಆರ್‌ಸಿ ಅಧಿಕಾರಿ ಯುನಸ್ ಬಾಬು, ಇಸಿಓ ರಾಮಕೃಷ್ಣ, ವೈದ್ಯಾಧಿಕಾರಿಗಳಾದ ಡಾ ಪರ್ಹಾನ್ ನಸ್ರೀನ್ ಖಾಜಿ, ಡಾ ಸುನೀಲ್, ಡಾ ಗುಂಡಮ್ಮ, ಡಾ ಅಸ್ಫಾಕ್ ಹುಸೇನ್ ಡಿಹೆಚ್‌ಇಓ ಈಶ್ವರ ಹೆಚ್ ದಾಸಪ್ಪನವರ, ಹಿರಿಯ ಹೆಚ್‌ಐಓ ಸುರೇಶ್, ಬಿಹೆಚ್‌ಇಓ ಸರೋಜಾ ಕೆ, ಹಿರಿಯ ಪಿಹೆಚ್‌ಸಿಓ ಈರಮ್ಮ, ಎಮ್‌ಅ?ಯಂಡ್‌ಇ ಗುರುಗಂಪಾ, ಬಿಪಿಎಮ್ ವರಲಕ್ಷ್ಮೀ, ತಾಲೂಕಾ ಆಶಾ ಮೇಲ್ವಿಚಾರಕಿ ಮರಿಯಾಳಮ್ಮ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಕ್ಷಯಮುಕ್ತ ಗ್ರಾಮ ಪಂಚಾಯತಿಗಳಿಗೆ ಆರೋಗ್ಯ ಇಲಾಖೆಯಿಂದ ಪ್ರಶಸ್ತಿ ವಿತರಣೆ


ನೈಜ್ಯ ದೆಸೆ ನ್ಯೂಸ್

**ರಾಯಚೂರು: ವಿಶ್ವ ಕ್ಷಯರೋಗ ದಿನಾಚರಣೆ ಅಂಗವಾಗಿ ಭಾರತ ಸರಕಾರದ ಮಾರ್ಗಸೂಚಿಂ–ಣನ್ವಯ ಜಿಲ್ಲೆಯ 18 ಗ್ರಾಮ ಪಂಚಾಯತಗಳು ಕ್ಷಯಮುಕ್ತ ಗ್ರಾಮ ಪಂಚಾಯತಿಗೆ ಆಯ್ಕೆಯಾಗಿದ್ದು, ಕಲ್ಯಾಣ ಕರ್ನಾಟಕ ಭಾಗದಲ್ಲಿ ಕ್ಷಯರೋಗ ತಡೆಗೆ ಬೆಂಬಲವಾಗಿದೆ ಎಂದು ಜಿಲ್ಲಾ ಅರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸುರೇಂದ್ರಬಾಬು ಅವರು ಹೇಳಿದರು.**




ಮಾರ್ಚ್ 24ರ ಮಂಗಳವಾರ ದಂದು ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕೃಷ್ಣ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ರಾಷ್ಟ್ರೀಯ ಕ್ಷಯರೋಗ ನಿಯಂತ್ರಣ ವಿಭಾಗ ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಕ್ಷಯಮುಕ್ತ ಗ್ರಾಮ ಪಂಚಾಯತಿಗಳಿಗೆ ಪ್ರಶಸ್ತಿ ವಿತರಿಸಿ ಅವರು ಮಾತನಾಡಿದರು. ಜಿಲ್ಲೆಯ ಜಿಲ್ಲಾಧಿಕಾರಿಗಳ ಮಾರ್ಗದರ್ಶನ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾ–ರಿಗಳು ಇವರ ನಿರಂತರ ಸಮನ್ವಯದಿಂದ ಗ್ರಾಮ ಪಂಚಾಯತಿಯ ಜನಪ್ರತಿನಿಧಿಗಳ ಬೆಂಬಲದಿಂದ ಕಳೆದ 2024 ರಲ್ಲಿ 07 ಗ್ರಾಮ ಪಂಚಾಯತಗಳು ಕಂಚಿನ ಪದಕ ಪ್ರಶಸ್ತಿಗೆ ಆಯ್ಕೆಯಾಗಿದ್ದವು.

ಪ್ರಸ್ತುತ 2025 ರಲ್ಲಿ 18 ಗ್ರಾಮ ಪಂಚಾಯತಗಳು ಪೈಕಿ ಶಾವಂತಗೇರಾ ಗ್ರಾಮ ಪಂಚಾಯತ್ ಬೆಳಿ ಪದಕ ಹಾಗೂ ಇತರೆ 17 ಗ್ರಾಮ ಪಂಚಾಯತ್‌ಗಳು ಕಂಚಿನ ಪದಕಕ್ಕೆ ಆಯ್ಕೆಯಾಗಿವೆ ಎಂದರು. ಬಡವ, ಸಿರಿವಂತ, ಹೆಣ್ಣು–ಗಂಡು ಎಂಬ ಬೇಧವಿಲ್ಲದೆ ದೇಹದ ಉಗುರು ಹಾಗೂ ಕೂದಲು ಹೊರತುಪಡಿಸಿ ಎಲ್ಲ ಅಂಗಗಳಿಗೆ ಕ್ಷಯರೋಗ ಬರುತ್ತದೆ. ಆರ್ಥಿಕ ದುರ್ಬಲ–ರಿಗೆ ನಿಕ್ಷಯಮಿತ್ರ ಯೋಜನೆಯಡಿ ದಾನಿಗಳಿಂದ ಪೌಷ್ಟಿಕಾಹಾರ ಕೀಟ್ ಒದಗಿಸಲಾಗುತ್ತಿದೆ. ಈ ಕಾರ್ಯಕ್ಷಮತೆಗೆ ಮೆಚ್ಚುಗೆ ವ್ಯಕ್ತವಾಗಿದೆ ಎಂದರು. ಈ ವೇಳೆ ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ




ಡಾ.ಮಹಮ್ಮದ್ ಶಾಕೀರ್ ಮೊಹಿಯುದ್ದೀನ್ ಅವರು ಮಾತನಾಡಿ, ಈಗಾಗಲೇ ಖಾಯಿಲೆ ಬಗ್ಗೆ ಕ್ಷೇತ್ರ ಸಿಬ್ಬಂದಿಯವರಾದ ಬಿಹೆಚ್‌ಇಓ, ಹೆಚ್‌ಐಓ, ಪಿಹೆಚ್‌ಸಿಓ, ಸಿಹೆಚ್‌ಓ, ಎಸ್‌ಟಿಎಸ್, ಎಸ್‌ಟಿಎಲ್‌ಎಸ್, ಆಶಾ ಕಾರ್ಯಕರ್ತೆಯರು ತಾಯಂದಿರ ಸಭೆ, ಗುಂಪು ಸಭೆ, ಗ್ರಾಮ ಸಭೆ ಹಾಗೂ ಶಾಲೆಗಳಲ್ಲಿ ನಿರಂತರ ಜಾಗೃತಿ ನೀಡುತ್ತಿದ್ದು, ಕ್ಷಯ ಖಚಿತ ಪ್ರಕರಣಗಳಲ್ಲಿ ತೀವ್ರ ನಿಗಾ ವಹಿಸಿ ಚಿಕಿತ್ಸೆ ಪೂರ್ಣಗೊಳಿಸಿ ಗುಣಪಡಿಸುವ ಕಾರ್ಯ ಮಾಡಲಾಗುತ್ತಿದೆ ಎಂದರು. ಪ್ರಶಸ್ತಿ ವಿಜೇತ ಗ್ರಾಮ ಪಂಚಾಯತಿಗಳು: ಲಿಂಗಸೂಗುರು ತಾಲೂಕಿನ ಬನ್ನಿಗೊಳ, ಹಲಕವಟಗಿ, ನಾಗರಾಳ, ನರಕಲದಿನ್ನಿ, ಉಪ್ಪಾರನಂದಿಹಾಳ,

ಸಿಂಧನೂರು ತಾಲೂಕಿನ ಚನ್ನಳ್ಳಿ, ದೇವರಗುಡಿ, ಗೋನವಾರ, ಆರ್ ಹೆಚ್ ನಂಬರ–2, ಮಸ್ಕಿ ತಾಲೂಕಿನ ಅಂಕುಶದೊಡ್ಡಿ, ದಿಗ್ಗನಾಯಕನಭಾವಿ, ಮಟ್ಟೂರು, ದೇವದುರ್ಗ ತಾಲೂಕಿನ ಶಾವಂತಗೇರಾ, ಆಲ್ಕೋಡ್, ಹಿರೆಬೂದುರು, ಮಾನವಿ ತಾಲೂಕಿನ ಪೋತ್ನಾಳ, ಸಿರವಾರ ತಾಲೂಕಿನ ಪಾಮನಕಲ್ಲೂರು, ರಾಯಚೂರು ತಾಲೂಕಿನ ಮಟಮಾರಿ ಗ್ರಾಮ ಪಂಚಾಯತಗಳು ಪ್ರಶಸ್ತಿ ಪಡೆದುಕೊಂಡಿವೆ. ಇದೇ ಸಂದರ್ಭದಲ್ಲಿ ಜಿಲ್ಲಾ ಸರ್ವೆಕ್ಷಣಾಧಿಕಾರಿ ಡಾ.ಗಣೇಶ ಕೆ, ಡಿಪಿಡಿಓ ಡಾ.ಚಂದ್ರಶೇಖರಯ್ಯ ಸ್ವಾಮಿ, ನವೋದಯ ವೈದ್ಯಕೀಯ ಮಹಾವಿದ್ಯಾಲಯದ ಪಿಎಸ್‌ಎಮ್ ವಿಭಾಗದ ಡಾ.ರೂಪಕಲಾ, ಡಾ.ಪ್ರತಿಭಾ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಜಿಲ್ಲಾ ಕಾರ್ಯಕ್ರಮ ಸಂಯೋಜಕ ಅಮರೇಶ ಕುಮಾರ, ಡಿಪಿಪಿಎಮ್‌ಸಿ ಮೊಹೀನ್ ಪಾಶಾ, ಜಿಲ್ಲಾ ಏಡ್ಸ್ ಮೇಲ್ವಿಚಾರಕ ಮಲ್ಲಯ್ಯ ಮಠಪತಿ, ಸಿಪಿಓ ಬಸವರಾಜಗೌಡ ಸೇರಿದಂತೆ ವೈದ್ಯರು, ವಿವಿಧ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು, ಕಾರ್ಯದರ್ಶಿಗಳು ಎಸ್‌ಟಿಎಸ್, ಎಸ್‌ಟಿಎಲ್‌ಎಸ್, ಟಿಬಿ ವಿಭಾಗ, ಏಡ್ಸ್ ವಿಭಾಗದ ಸಿಬ್ಬಂದಿಯರು, ಆಶಾ ಕಾರ್ಯಕರ್ತೆಯರು ಇದ್ದರು.

## ನೇಮಕಾತಿ ಪ್ರಕಟಣೆ

ಕುಕ್ಕೆ ಶ್ರೀ ಸುಬ್ರಹ್ಮಣ್ಯ ದೇವಸ್ಥಾನ ನೇಮಕಾತಿ 2026–ವಿವಿಧ ಸ್ವಯಂಸೇವಕರ ಹುದ್ದೆಗಳಿಗೆ ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಮಾರ್ಚ್ 25, 2026 ಕುಕ್ಕೆ ಶ್ರೀ ಸುಬ್ರಹ್ಮಣ್ಯ ದೇವಸ್ಥಾನ ನೇಮಕಾತಿ 2026: ವಿವಿಧ ಸ್ವಯಂಸೇವಕರ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಕುಕ್ಕೆ ಶ್ರೀ ಸುಬ್ರಹ್ಮಣ್ಯ ದೇವಸ್ಥಾನವು ಕುಕ್ಕೆ ಶ್ರೀ ಸುಬ್ರಹ್ಮಣ್ಯ ದೇವಸ್ಥಾನದ ಅಧಿಕೃತ ಅಧಿಸೂಚನೆ ಮಾರ್ಚ್ 2026 ರ ಮೂಲಕ ಸ್ವಯಂಸೇವಕರ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ತುಮಕೂರು–ಕರ್ನಾಟಕ ಸರ್ಕಾರದಲ್ಲಿ ವೃತ್ತಿಜೀವನವನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 16–ಏಪ್ರಿಲ್–2026 ರಂದು ಅಥವಾ ಮೊದಲು ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 25–03–2026 ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 16–ಏಪ್ರಿಲ್–2026 ಅಧಿಕೃತ ವೆಬ್‌ಸೈಟ್: itms.kar.nic.in

## ಇಂದು ರಾಜ್ಯ ಮಾನವ ಹಕ್ಕುಗಳ ಆಯೋಗದ ಸಭೆ; ಅಹವಾಲು ಸಲ್ಲಿಸಲು ಸಾರ್ವಜನಿಕರಿಗೆ ಅವಕಾಶ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ಹಂಗಾಮಿ ಅಧ್ಯಕ್ಷರು, ನಿವೃತ್ತ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಮತ್ತು ಕರ್ನಾಟಕ ಲೋಕಸೇವಾ ಆಯೋಗದ ಮಾಜಿ ಅಧ್ಯಕ್ಷರಾದ ಹಿರಿಯ ಐಎಎಸ್ ಅಧಿಕಾರಿ ಡಾ.ಟಿ.ಶಾಮ ಭಟ್ ಹಾಗೂ ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ನ್ಯಾಯಿಕ ಸದಸ್ಯರಾದ ಎಸ್ ಕೆ ವಂಟಿಗೋಡಿ ಅವರಿಂದ ಆಯೋಗದ ಸಭೆಯು ಮಾರ್ಚ 26ರ ಬೆಳಗ್ಗೆ 11 ಗಂಟೆಯಿಂದ ಮಧ್ಯಾಹ್ನ 12 ಗಂಟೆವರೆಗೆ ಯಕ್ಲಾಸಪುರದಲ್ಲಿರುವ ನೂತನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆಯಲಿದೆ.**

ಈ ವೇಳೆ ರಾಯಚೂರು ಜಿಲ್ಲೆಗೆ ಸಂಬಂಧಿಸಿದಂತೆ ಆಯೋಗದಲ್ಲಿ ನೋಂದಣಿಯಾಗಿರುವ ಪ್ರಕರಣಗಳನ್ನು ಇತ್ಯರ್ಥಪಡಿಸಿ ವಿಲೇಮಾಡಿ ಕ್ರಮ ಜರುಗಿಸಲು ಉದ್ದೇಶಿಸಲಾಗಿದೆ. ದೂರುದಾರರು ಹಾಗೂ ಪ್ರತಿವಾದಿ ಪ್ರಾಧಿಕಾರಗಳು ಈ ಸೌಲಭ್ಯದ ಸದುಪಯೋಗ ಪಡಿಸಿಕೊಳ್ಳಬೇಕೆಂದು ಕೋರಲಾಗಿದೆ. ಮಾನವ ಹಕ್ಕು ಉಲ್ಲಂಘನೆ ಪ್ರಕರಣಗಳಿಗೆ ಸಂಬಂಧಿಸಿದಂತೆ ರಾಯಚೂರು ಜಿಲ್ಲೆಯಲ್ಲಿನ ಸಾರ್ವಜನಿಕರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ನಿಗದಿತ ದಿನಾಂಕದಂದು ಸಾರ್ವಜನಿಕರಿಂಚಿದ ದೂರುಗಳು ಅಥವಾ ಅಹವಾಲುಗಳನ್ನು ಸಹ ಸ್ವೀಕರಿಸಲು ಉದ್ದೇಶಿಸಲಾಗಿದ್ದು, ಸಾರ್ವಜನಿಕರು ನಿಗದಿತ ದಿನಾಂಕದಂದು ಆಯೋಗದ ಅಧ್ಯಕ್ಷರು ಹಾಗೂ ಸದಸ್ಯರನ್ನು ಸಂಪರ್ಕಿಸಿ ದೂರುಗಳನ್ನು ಸಲ್ಲಿಸಬಹುದು ಎಂದು ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ಪ್ರಕಟಣೆ ತಿಳಿಸಿದೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಭಾರತ ಸರ್ಕಾರದ ವಾರ್ತಾಶಾಖೆಯಿಂದ ವಾರ್ತಾಲಾಪ ಕಾರ್ಯಾಗಾರ

## ಸ್ಥಳೀಯ ಪತ್ರಕರ್ತರ ಕಾರ್ಯಕ್ಷಮತೆಯೂ ಹೆಚ್ಚಾಗಲಿ: ಜಿಲ್ಲಾಧಿಕಾರಿ ನಿತೀಶ್ ಕೆ ಸಲಹೆ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ವರದಿಗಾರಿಕೆ, ಸಂಪಾದಕೀಯ ಬರೆಹ, ಪತ್ರಿಕೋದ್ಯಮದ ಪ್ರಾಥಮಿಕ ಹಂತದ ತಿಳಿವಳಿಕೆ ಸೇರಿದಂತೆ ನಾನಾ ವಿಷಯಗಳ ಬಗ್ಗೆ ತಾಲೂಕು ಮಟ್ಟದಲ್ಲಿನ ಪತ್ರಕರ್ತರಿಗೆ ತಿಳಿವಳಿಕೆಯ ಕಾರ್ಯಕ್ಷಮತೆ, ಕಾರ್ಯದಕ್ಷತೆ ಹೆಚ್ಚಿಸುವ ದಿಶೆಯಲ್ಲಿ ಕಾರ್ಯಕ್ರಮಗಳನ್ನು, ಕಾರ್ಯಾಗಾರಗಳನ್ನು ರೂಪಿಸಬೇಕಿದೆ ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಹೇಳಿದರು.**







ಭಾರತ ಸರ್ಕಾರದ ವಾರ್ತಾ ಶಾಖೆ (ಪಿಐಬಿ) ಬೆಂಗಳೂರು ಹಾಗೂ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಮಾರ್ಚ್ 25ರಂದು ನಗರದ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ನಡೆದ ಕೇಂದ್ರ ಪುರಸ್ಕೃತ ಯೋಜನೆಗಳ ಕುರಿತು ಮಾಧ್ಯಮ ಪ್ರತಿನಿಧಿಗಳಿಗೆ ವಾರ್ತಾಲಾಪ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು. ಮಾಧ್ಯಮಗಳಿಂದ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಗಟ್ಟಿಗೊಳಿಸುವ ಕಾರ್ಯ ನಿರಂತರವಾಗಿ ಆಗಬೇಕು ಎಂದು ಸಲಹೆ ಮಾಡಿದ ಜಿಲ್ಲಾಧಿಕಾರಿಗಳು, ವಾರ್ತಾಲಾಪದಂತಹ ಈ ರೀತಿಯ ಕಾರ್ಯಗಾರಗಳು ನಿರಂತರ ನಡೆಯಬೇಕು ಎಂದರು.

ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ತಾಲೂಕು ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್ ಅವರು ಮಾತನಾಡಿ, ಕೆಲವು ಯೋಜನೆಗಳಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಪಾಲುದಾರಿಕೆ ಇರುತ್ತದೆ. ಆದ್ದರಿಂದ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಒಗ್ಗೂಡಿ ಯೋಜನೆಗಳ ಅನುಷ್ಠಾನಕ್ಕೆ ಶ್ರಮಿಸಬೇಕು. ಜನತೆಗೆ ತಿಳಿಯುವ ಭಾಷೆಯಲ್ಲಿ ಯೋಜನೆಗಳ ಪ್ರಚಾರ ಕಾರ್ಯ ಆಗಬೇಕು. ಬಹಳಷ್ಟು ಯೋಜನೆಗಳ ಮಾಹಿತಿ ಆನಲೈನದಲ್ಲಿ ಲಭ್ಯವಿದ್ದು, ಕನ್ನಡ ಭಾಷೆಯಲ್ಲಿ ಬುಕ್ ಲೆಟ್ ಸಿದ್ದಪಡಿಸಿ ಸಾಮಾನ್ಯ ಜನರಿಗೆ ತಿಳಿಸುವ ಕಾರ್ಯವಾಗಬೇಕು ಎಂದರು.

ಭಾರತ ಸರ್ಕಾರದ ವಾರ್ತಾ ಶಾಖೆಯ ಹೆಚ್ಚುವರಿ ಮಹಾ ನಿರ್ದೇಶಕರಾದ ಎಚ್ ಜಿ ರವೀಂದ್ರ ಅವರು ಮಾತನಾಡಿ, ಕೇಂದ್ರ ಸರ್ಕಾರದ ಯೋಜನೆಗಳ ಪ್ರಚುರಪಡಿಸಲು ಪತ್ರಕರ್ತರು ಹೆಚ್ಚಿನ ಒತ್ತು ಕೊಡಬೇಕು ಎಂದು ಮನವಿ ಮಾಡಿದರು. ಬಡವರು, ಮಹಿಳೆಯರು, ಯುವಕರು, ರೈತರು ಸೇರಿದಂತೆ ಎಲ್ಲ ವರ್ಗದ ಜನರಿಗೆ ಪ್ರಧಾನ ಮಂತ್ರಿಗಳು ಹಲವಾರು ಕಾರ್ಯಕ್ರಮಗಳನ್ನು ರೂಪಿಸಿದ್ದಾರೆ. ಈ ಯೋಜನೆಗಳ ಬಗ್ಗೆ ವ್ಯಾಪಕ ಮಾಹಿತಿ ಜನತೆಗೆ ತಲುಪಿಸುವ ಕಾರ್ಯ ಆಗಬೇಕಿದೆ ಎಂದರು.

ಜಿಲ್ಲಾ ಪಂಚಾಯತ್ ಸಿಇಓ ಈಶ್ವರ ಕಾಂದೂ ಅವರು ಮಾತನಾಡಿ, ಭಾರತ ಸರ್ಕಾರದ ವಾರ್ತಾ ಶಾಖೆಯಿಂದ ರಾಯಚೂರು ಜಿಲ್ಲೆಯಲ್ಲಿ ಪತ್ರಕರ್ತರಿಗೆ ಕಾರ್ಯಗಾರ ಹಮ್ಮಿಕೊಂಡಿದ್ದು ಶ್ಲಾಘನೀಯ ಕಾರ್ಯ ಎಂದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷರಾದ ಆರ್ ಗುರುನಾಥ್ ಅವರು ಮಾತನಾಡಿ, ಬೇರೆ ಜಿಲ್ಲೆಗಳಿಗೆ ಹೋಲಿಸಿದರೆ ರಾಯಚೂರು ಜಿಲ್ಲೆಯಲ್ಲಿ ಬಹುತೇಕ ಸಣ್ಣ ಪತ್ರಿಕೆಗಳು ಸ್ವತಂತ್ರವಾಗಿ ಮುದ್ರಣ ಯಂತ್ರಗಳನ್ನು ಹೊಂದಿ ಉತ್ತಮವಾಗಿ ಮುದ್ರಣವಾಗುತ್ತಿವೆ ಎಂದು ತಿಳಿಸಿದರು.

ರಾಯಚೂರು ರಿಪೋರ್ಟರ್ಸ ಗಿಲ್ಡನ ಜಿಲ್ಲಾ ಅಧ್ಯಕ್ಷರಾದ ವಿಜಯಕುಮಾರ ಜಾಗಟಗಲ್ ಅವರು ಮಾತನಾಡಿ, ಯೋಜನೆಗಳ ಪ್ರಚಾರದ ಜೊತೆಗೆ ಆ ಯೋಜನೆಗಳ ಅನುಷ್ಠಾನದಲ್ಲಿನ ಸಾಧಕ ಬಾಧಕಗಳ ಬಗ್ಗೆ ಸಹ ನಿರಂತರವಾಗಿ ಚರ್ಚಿಸುವ ಕಾರ್ಯ ಆಗಬೇಕು ಎಂದು ತಿಳಿಸಿದರು.

ರಾಯಚೂರಿನ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಗವಿಸಿದ್ದಪ್ಪ ಹೊಸಮನಿ ಮಾತನಾಡಿದರು. ಜಿಲ್ಲಾ ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ಎಸ್ ಜೆ ಕುಮಾರಸ್ವಾಮಿ, ಜಿಪಂ ಯೋಜನಾ ನಿರ್ದೇಶಕರಾದ ಶರಣ ಬಸವರಾಜ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸುರೇಂದ್ರಬಾಬು ಸೇರಿದಂತೆ ಇತರರು ಉಪಸ್ಥಿತರಿದ್ದರು. ಭಾರತ ಸರ್ಕಾರದ ವಾರ್ತಾ ಶಾಖೆಯ ಸಹಾಯಕ ನಿರ್ದೇಶಕರಾದ ಮಧು ಸ್ವಾಗತಿಸಿದರು.

# ಸಾವಿನಲ್ಲೂ ಸಾರ್ಥಕತೆ: ನೇತ್ರದಾನದ ಮೂಲಕ ಇಬ್ಬರಿಗೆ ಬೆಳಕಾದ ಬಾಲಕ ಆಕಾಶ

ನೈಜ್ಯ ದೆಸೆ ನ್ಯೂಸ್

**ಮುದ್ದೇಬಿಹಾಳ: ಮಾನವೀಯತೆಯ ಮೌಲ್ಯವನ್ನು ಸಾರುವ ಮನಮುಟ್ಟುವ ಘಟನೆ ವಿಜಯಪುರದಲ್ಲಿ ನಡೆದಿದೆ. ರಸ್ತೆ ಅಪಘಾತದಲ್ಲಿ ಗಂಭೀರವಾಗಿ ಗಾಯಗೊಂಡಿದ್ದ ಮುದ್ದೇಬಿಹಾಳ ತಾಲ್ಲೂಕಿನ ಡವಳಗಿ ಗ್ರಾಮದ ಹತ್ತು ವರ್ಷದ ಬಾಲಕ ಆಕಾಶ ಹರಿಜನ ಸಾವಿನಲ್ಲೂ ಸಾರ್ಥಕತೆ ಸಾಧಿಸಿ, ಇಬ್ಬರು ಅಂಧರ ಬದುಕಿಗೆ ಬೆಳಕಾಗಿದ್ದಾನೆ.**

ಮಲ್ಲಪ್ಪ ಹರಿಜನ ಹಾಗೂ ಸುಜಾತಾ ದಂಪತಿಯ ಏಕೈಕ ಪುತ್ರನಾದ ಆಕಾಶ (10) ಮಾರ್ಚ್ 22ರಂದು ಸಂಭವಿಸಿದ ರಸ್ತೆ ಅಪಘಾತದಲ್ಲಿ ತೀವ್ರವಾಗಿ ಗಾಯಗೊಂಡಿದ್ದನು. ತಕ್ಷಣವೇ ಆತನನ್ನು ವಿಜಯಪುರದ ಬಿ.ಎಲ್.ಡಿ.ಇ ಆಸ್ಪತ್ರೆಗೆ ದಾಖಲಿಸಿ ತುರ್ತು ನಿಗಾ ಘಟಕದಲ್ಲಿ ಚಿಕಿತ್ಸೆ ನೀಡಲಾಗುತ್ತಿತ್ತು. ಆದರೆ ವೈದ್ಯರ ಎಲ್ಲಾ ಪ್ರಯತ್ನಗಳ ನಡುವೆಯೂ ಆತನ ಮೆದುಳು ನಿಷ್ಕ್ರಿಯಗೊಂಡು (ಬ್ರೇನ್ ಡೆಡ್) ಮಾರ್ಚ್ 25ರಂದು ಮೃತಪಟ್ಟನು.



ಮಗನನ್ನು ಕಳೆದುಕೊಂಡ ನೋವಿನ ನಡುವೆಯೂ ಪೋಷಕರು ಮಾನವೀಯತೆಯನ್ನು ಮೆರೆದಿದ್ದಾರೆ. ಮೊದಲಿಗೆ ಅಂಗಾಂಗ ದಾನ ಮಾಡಲು ಮುಂದಾದರೂ, ಅಪಘಾತದ ಪರಿಣಾಮದಿಂದ ಇತರ ಅಂಗಾಂಗಗಳನ್ನು ದಾನ ಮಾಡಲು ಸಾಧ್ಯವಾಗಲಿಲ್ಲ. ಕೊನೆಗೆ "ದೇಹವು ಸುಟ್ಟುಹೋಗುವ ಬದಲು ಇನ್ನೊಬ್ಬರ ಬದುಕಿಗೆ ಬೆಳಕಾಗಲಿ" ಎಂಬ ಉನ್ನತ ಚಿಂತನೆಯೊಂದಿಗೆ ನೇತ್ರದಾನ ಮಾಡಲು ನಿರ್ಧರಿಸಿದರು. ಬಾಲಕನ ಮೃತದೇಹದಿಂದ ಎರಡು ಕಣ್ಣುಗಳನ್ನು ದಾನ ಮಾಡಲಾಗಿದ್ದು, ಇದರಿಂದ ಇಬ್ಬರು ಅಂಧರ ಬದುಕಿಗೆ ಬೆಳಕು ದೊರೆತಿದೆ. ಏಕೈಕ ಪುತ್ರನನ್ನು ಕಳೆದುಕೊಂಡಿದ್ದರೂ ಸಮಾಜಕ್ಕೆ ಮಾದರಿಯಾದ ಈ ನಿರ್ಧಾರ ಎಲ್ಲರ ಮನಸ್ಸನ್ನು ಕಲುಕಿದೆ. ಆಕಾಶ ತನ್ನ ತಂದೆ–ತಾಯಿಯ ಏಕೈಕ ಮಗನಾಗಿದ್ದು, ಇಬ್ಬರು ಸಹೋದರಿಯರನ್ನು ಅಗಲಿದ್ದಾನೆ. ಕುಟುಂಬದ ಈ ತ್ಯಾಗ ಮತ್ತು ಮಾನವೀಯತೆ ಎಲ್ಲರಿಂದಲೂ ಪ್ರಶಂಸೆಗೆ ಪಾತ್ರವಾಗಿದೆ.

ಈ ಹಿನ್ನೆಲೆಯಲ್ಲಿ ಬಿ.ಎಲ್.ಡಿ.ಇ ಸಂಸ್ಥೆಯ ಆಡಳಿತ ಮಂಡಳಿ, ವೈದ್ಯಕೀಯ ಸಿಬ್ಬಂದಿ ಹಾಗೂ ಸಾರ್ವಜನಿಕರು ಕುಟುಂಬದ ನಿರ್ಧಾರವನ್ನು ಶ್ಲಾಘಿಸಿದ್ದಾರೆ. ಆಸ್ಪತ್ರೆಯ ಅಧಿಕಾರಿಗಳು ಕುಟುಂಬಕ್ಕೆ ಸಾಂತ್ವನ ಹೇಳಿ, ಬಾಲಕನಿಗೆ ಶ್ರದ್ಧಾಂಜಲಿ ಸಲ್ಲಿಸಿದರು. ರಾಷ್ಟ್ರೀಯ ದೇಹಾಂಗ ದಾನ ಜಾಗೃತಿ ಸಮಿತಿಯ ಜಿಲ್ಲಾ ಸಂಚಾಲಕ ಪ್ರೀತು ದಶವಂತ ಅವರು ಮೃತ ಬಾಲಕನ ಆತ್ಮಕ್ಕೆ ಶಾಂತಿ ಕೋರಿ ಪ್ರಾರ್ಥಿಸಿದರು. ಈ ಘಟನೆ ಸಾವಿನಲ್ಲೂ ಸಾರ್ಥಕತೆ ಸಾಧಿಸಬಹುದೆಂಬ ಸಂದೇಶವನ್ನು ಸಮಾಜಕ್ಕೆ ನೀಡಿದ್ದು, ಡವಳಗಿ ಗ್ರಾಮದ ಈ ಬಾಲಕನ ಮಾನವೀಯ ಕಾರ್ಯ ಎಲ್ಲರಿಗೂ ಪ್ರೇರಣೆಯಾಗಿದೆ.

# ಚವನಭಾವಿಯಲ್ಲಿ ಜೆಜಿಎಂ ಕಾಮಗಾರಿ ಪರಿಶೀಲನೆ; ನೀರಿನ ಸಮಸ್ಯೆ ಕುರಿತು ಗ್ರಾಮಸ್ಥರ ಅಳಲು

ನೈಜ್ಯ ದೆಸೆ ನ್ಯೂಸ್

**ಮುದ್ದೇಬಿಹಾಳ: ತಾಲ್ಲೂಕಿನ ಚವನಭಾವಿ ಗ್ರಾಮದಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಜಲ ಜೀವನ ಮಿಷನ್ (ಜೆಜಿಎಂ) ಯೋಜನೆಯಡಿ ಕೈಗೊಂಡಿರುವ ಕುಡಿಯುವ ನೀರಿನ ಕಾಮಗಾರಿಗಳನ್ನು ಮಂಗಳವಾರ ರಾಜ್ಯ ಗುಣಮಟ್ಟ ಮೇಲ್ವಿಚಾರಣಾಧಿಕಾರಿ ಮೋಹನ್ ಭೇಟಿ ನೀಡಿ ಪರಿಶೀಲಿಸಿದರು.**





ಗ್ರಾಮದ ವಿವಿಧ ಮನೆಗಳಿಗೆ ಭೇಟಿ ನೀಡಿ ನಳ ಸಂಪರ್ಕಗಳ ಸ್ಥಿತಿಯನ್ನು ಪರಿಶೀಲಿಸಿದ ಅವರು, ಮನೆಮಾಲಕಿಯರೊಂದಿಗೆ ಸಂವಾದ ನಡೆಸಿ ನೀರಿನ ಪೂರೈಕೆ ಸಮರ್ಪಕವಾಗಿದೆಯೇ ಎಂಬುದರ ಬಗ್ಗೆ ಮಾಹಿತಿ ಪಡೆದುಕೊಂಡರು. ಈ ವೇಳೆ ಕೆಲವೆಡೆ ಮಾತ್ರ ನೀರು ಸರಿಯಾಗಿ ಬರುತ್ತಿದ್ದು, ಅನೇಕ ಕಡೆಗಳಲ್ಲಿ ಪೂರೈಕೆ ಅಸಮರ್ಪಕವಾಗಿದೆ ಎಂದು ಗ್ರಾಮಸ್ಥರು ಅಸಮಾಧಾನ ವ್ಯಕ್ತಪಡಿಸಿದರು. ಪರಿಶೀಲನೆ ಸಂದರ್ಭದಲ್ಲಿ ಗ್ರಾಮಸ್ಥರು ತಮ್ಮ ಅಳಲುಗಳನ್ನು ಹಂಚಿಕೊಂಡು, ಗ್ರಾಮದಲ್ಲಿ ಒಂದೇ ಒಂದು ಕೊಳವೆಬಾವಿ ಇರುವುದರಿಂದ ಸಮರ್ಪಕ ನೀರಿನ ಮೂಲದ ಕೊರತೆ ಉಂಟಾಗಿದೆ. ಇದರಿಂದ ಎಲ್ಲಾ ಮನೆಗಳಿಗೆ ಸಮರ್ಪಕವಾಗಿ ನೀರು ಒದಗಿಸಲು ಸಾಧ್ಯವಾಗುತ್ತಿಲ್ಲ.

ಬಹುಹಳ್ಳಿ ಕುಡಿಯುವ ನೀರಿನ ಯೋಜನೆಯಡಿ ನೀರು ಬಂದರೆ ಮಾತ್ರ ಸಮಸ್ಯೆ ಶಾಶ್ವತವಾಗಿ ಪರಿಹಾರವಾಗಲಿದೆ ಎಂದು ತಿಳಿಸಿದ್ದಾರೆ. ಇದಲ್ಲದೆ, ಕೆಲವು ವಾರ್ಡ್‌ಗಳಲ್ಲಿ ಜೆಜಿಎಂ ನಳಗಳ ಮೂಲಕ ನೀರು ಸರಿಯಾಗಿ ತಲುಪುತ್ತಿಲ್ಲ ಎಂಬುದಾಗಿ ಸಾರ್ವಜನಿಕರು ದೂರಿದರು. ಕಾಮಗಾರಿಯ ಗುಣಮಟ್ಟ ಹಾಗೂ ನೀರಿನ ಹಂಚಿಕೆ ವ್ಯವಸ್ಥೆಯಲ್ಲಿನ ದೋಷಗಳನ್ನು ಅಧಿಕಾರಿಗಳ ಗಮನಕ್ಕೆ ತಂದರು. ಗ್ರಾಮಸ್ಥರ ದೂರನ್ನು ಆಲಿಸಿದ ಮೋಹನ್, ಕಾಮಗಾರಿಯ ಸಮಗ್ರ ಪರಿಶೀಲನೆ ನಡೆಸಿದ್ದು, ಸಂಬಂಧಿತ ಎಲ್ಲ ಅಂಶಗಳನ್ನು ಒಳಗೊಂಡ ವರದಿಯನ್ನು ಶೀಘ್ರದಲ್ಲೇ ಸಿದ್ಧಪಡಿಸಿ ಸರ್ಕಾರಕ್ಕೆ ಸಲ್ಲಿಸುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಇಂಜಿನಿಯರ್ ಎ.ಎಲ್. ರಾಠೋಡ್, ಅಡವಿ ಸೋಮನಾಳ ಗ್ರಾಮ ಪಂಚಾಯತ್ ಕಾರ್ಯದರ್ಶಿ ಬಸನಗೌಡ ಬಿರಾದಾರ ಹಾಗೂ ಗ್ರಾಮಸ್ಥರಾದ ಅಂಬ್ರಯ್ಯ ಮಠ, ಬಸವರಾಜ ಕುಂಬಾರ, ಬಸಪ್ಪ ಬಿರಾದಾರ, ವಿರೇಶ ಚಲವಾದಿ, ಬೀರಪ್ಪ ಸೋಮನಾಳ, ಮೌನೇಶ ಬಿರಾದಾರ ಸೇರಿದಂತೆ ಗುತ್ತಿಗೆದಾರರು ಮತ್ತು ಇಲಾಖೆಯ ಸಿಬ್ಬಂದಿ ಉಪಸ್ಥಿತರಿದ್ದರು.

# ಉತ್ತರ ಕರ್ನಾಟಕದ ಮೊಟ್ಟಮೊದಲ ಎನ್–ಜೆನ್ ಅಂಚೆ ಕಚೇರಿ ಉದ್ಘಾಟನೆ

## ಅಂಚೆ ಸೇವೆ ಕ್ಯಾಂಪಸ್‌ಗೆ ಮತ್ತಷ್ಟು ಹತ್ತಿರ: ಕುಲಪತಿ ಡಾ.ಎಂ.ಹನುಮಂತಪ್ಪ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಯುವ ಸಮುದಾಯವನ್ನು ಅಂಚೆ ಸೇವೆಯತ್ತ ಸೆಳೆಯಲು ಆಧುನೀಕರಣದತ್ತ ಹೆಜ್ಜೆ ಹಾಕಿರುವ ಭಾರತೀಯ ಅಂಚೆ ಇಲಾಖೆಯ ಉತ್ತರ ಕರ್ನಾಟಕದ ಮೊಟ್ಟಮೊದಲ ಎನ್–ಜೆನ್ ಅಂಚೆ ಕಚೇರಿಗೆ ರಾಯಚೂರಿನ ಕೃಷಿ ವಿಶ್ವವಿದ್ಯಾಲಯದ ಆವರಣದಲ್ಲಿ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ.ಎಂ.ಹನುಮಂತಪ್ಪ ಅವರು ಮಾರ್ಚ 25ರಂದು ಚಾಲನೆ ನೀಡಿದರು.**





ಈ ವೇಳೆ ಡಾ.ಎಂ.ಹನುಮಂತಪ್ಪ ಅವರು ಮಾತನಾಡಿ, ಇಂದಿನ ಕಾಲದಲಿ ಕಣ್ಮರೆಯಾಗುತ್ತಿರುವ ಅಂಚೆ ಸೇವೆಗಳನ್ನು ವಿದ್ಯಾರ್ಥಿಗಳು, ಸಂಶೋಧಕರು ಮತ್ತು ಕ್ಯಾಂಪಸ್ ಸಮುದಾಯಕ್ಕೆ ಇನ್ನಷ್ಟು ಹತ್ತಿರ ತರಬೇಕಾಗಿದೆ. ಇ–ಮೇಲ್, ವಾಟ್ಸಾ ಆಪ್ ಹಾಗೂ ಎಸ್‌ಎಂಎಸ್‌ಗಳ ಯುಗದಲ್ಲಿಯುವ ಜನತೆಯನ್ನು ಆಕರ್ಷಿಸುವ ಉದ್ದೇಶದಿಂದಲೇ ಭಾರತೀಯ ಅಂಚೆಯು ವಿನೂತನ ಪ್ರಯೋಗ ಆರಂಭಿಸಿದ್ದು, ಎಲ್ಲ ವಿದ್ಯಾರ್ಥಿಗಳು ಈ ಸೇವೆಗಳನ್ನು ಪಡೆಯಬೇಕು ಎಂದರು. ಕಚೇರಿಯು ಸ್ವಯಂ ಬುಕಿಂಗ್ ಕಿಂಯೋಸ್ಕ್ ಮತ್ತು ಕ್ಯೂ ಆರ್ ಕೋಡ್ ಆಧಾರಿತ ತ್ವರಿತ ಪಾವತಿ ಸೇವೆಗಳನ್ನು ಒಳಗೊಂಡಿದೆ. ಉಚಿತ ವೈಫೈ ಸೌಲಭ್ಯ, ಆರಾಮದಾಯಕ ಆಸನ ವ್ಯವಸ್ಥೆ, ಲ್ಯಾಪ್‌ಟಾಪ್ ಮತ್ತು ಮೊಬೈಲ್ ಚಾರ್ಜಿಂಗ್ ಪಾಯಿಂಟ್‌ಗಳು ಹಾಗೂ ಕಾಫಿ ವೆಂಡಿಂಗ್ ಯಂತ್ರ ಅಳವಡಿಸಲಾಗಿದೆ ಎಂದರು.

ಈ ವೇಳೆ ಧಾರವಾಡದ ಉತ್ತರ ಕರ್ನಾಟಕದ ಅಂಚೆ ಸೇವೆಗಳ ನಿರ್ದೇಶಕರಾದ ಶ್ರೀಹರ್ಷ ಎನ್. ಅವರು ಮಾತನಾಡಿ, 1997ರ ಮಧ್ಯದಿಂದ 2012ರ ಮೊದಲ ಭಾಗದವರೆಗೆ ಜನಿಸಿದ ಮಕ್ಕಳನ್ನು ನಾವು ಎನ್–ಜೆನ್ ಯುಗದವರು ಎಂದು ಕರೆಯಲಾಗುತ್ತದೆ. ಈ ಯುಗದಲ್ಲಿ ಹುಟ್ಟಿದ ಮಕ್ಕಳು ಜಗತ್ತಿನಲ್ಲಿ ಪ್ರಾರಂಭವಾದ ಕೌತುಕ ಮೂಡಿಸುವ ತಾಂತ್ರಿಕ ಯುಗದೊಂದಿಗೆ ಬೆಳೆದವರು. ಅದಲ್ಲದೆ ಈ ಮಕ್ಕಳು ಹೊಸ ಹೊಸ ಸಂಸ್ಕೃತಿ ಹಾಗೂ ವಿಭಿನ್ನ ಕಲೆಯನ್ನು ತಮ್ಮೊಂದಿಗೆ ಬೆಳೆಸಿಕೊಂಡು ಬರುತ್ತಿದ್ದಾರೆ.

ಹೀಗಾಗಿ ಈ ಯುಗದ ಮಕ್ಕಳನ್ನು ಎನ್–ಜಿನ್ ಎಂದು ಕರೆಯುತ್ತಿದ್ದು, ವಿದ್ಯಾರ್ಥಿಗಳಿಗೆ ಬೇಕಾಗುವ ಎಲ್ಲಾ ರೀತಿಯ ಸೌಲಭ್ಯಗಳನ್ನು ಪೋಸ್ಟ್ ಆಫೀಸ್ ನಲ್ಲಿ ಇದೆ. ಇದರ ಲಾಭವನ್ನು ಪಡೆಯಬೇಕು ಎಂದರು. ವಿದ್ಯಾರ್ಥಿಗಳು ಸಕ್ರಿಯವಾಗಿ ಭಾಗವಹಿಸಲೆಂಬ ಕಲ್ಪನೆಯಿಂದ ಈ ಕಚೇರಿ ಸ್ಥಾಪಿಸಲಾಗಿದೆ. ಇದು ವಿದ್ಯಾರ್ಥಿಗಳಿಂದ ವಿದ್ಯಾರ್ಥಿಗಳಿಗಾಗಿ ಎಂಬ ಧ್ಯೇಯವಾಕ್ಯದಡಿ ಕಾರ್ಯನಿರ್ವಹಿಸಲಿದೆ. ಇದು ಪಾರ್ಸೆಲ್ ಪ್ಯಾಕೇಜಿಂಗ್ ಸೇವೆಗಳನ್ನು ಸಹ ಒದಗಿಸಲಿದೆ. ವಿದ್ಯಾರ್ಥಿಗಳ ಸಮಯ ಉಳಿಸಿ, ಒತ್ತಡ ಕಡಿಮೆ ಮಾಡುತ್ತದೆ. ಅಲ್ಲದೆ, ಅಧ್ಯಯನ ಮಾಡುವ ಸ್ಥಳದಿಂದ ನೇರ ಅವರ ವಸ್ತುಗಳನ್ನು ಸಾಗಿಸಲು ಅಥವಾ ಕಳುಹಿಸಲು ಸುಲಭ ಮತ್ತು ಸುರಕ್ಷಿತ ಸ್ಥಳವಾಗಿದೆ. ಭಾರತೀಯ ಅಂಚೆಯು ದೇಶಾದ್ಯಂತ ವಿವಿಧ ಶಿಕ್ಷಣ ಸಂಸ್ಥೆಗಳಲ್ಲಿ ಇಂತಹ ಎನ್–ಜೆನ್ ಅಂಚೆ ಕಚೇರಿಗಳನ್ನು ವಿಸ್ತರಿಸಲಾಗಿದೆ ಎಂದರು.

ಈ ವೇಳೆ ಧಾರವಾಡದ ಎನ್.ಕೆ. ಪ್ರದೇಶ ಸಹಾಯಕ ಪೋಸ್ಟ್ ಮಾಸ್ಟರ್ ಜನರಲ್ (ಬಿಡಿ) ಎಚ್.ಎಂ.ಮಂಜೇಶ್‌ಅವರು ಮಾತನಾಡಿ, ಕರ್ನಾಟಕದ 3ನೇ ಹಾಗೂ ಉತ್ತರ ಕರ್ನಾಟಕ ಮೊದಲ ಕಚೇರಿಯಾಗಿದೆ. ಕಲ್ಯಾಣ ಕರ್ನಾಟಕ ಭಾಗವು ಹಿಂದುಳಿದ ಪ್ರದೇಶವಾಗಿದೆ. ಇಂತಹ ಹಿಂದುಳಿದ ಪ್ರದೇಶದ ಅಭಿವೃದ್ಧಿಗಾಗಿ ನಮ್ಮ ಇಲಾಖೆಯಿಂದ ಅಭಿವೃದ್ಧಿಗೆ ಆದ್ಯತೆ ನೀಡಲಾಗುತ್ತಿದೆ ಎಂದರು. ಯುವ ಜನಾಂಗವು ಕಚೇರಿಗೆ ಬರುವಂತೆ ಮಾಡಲು ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಅತಿ–ಕಡಿಮೆ ಖರ್ಚಿನಲ್ಲಿ ಸೇವೆಯನ್ನು ಒದಗಿಸುತ್ತಿದೆ. ಅವುಗಳನ್ನು ಸರಿಯಾಗಿ ಬಳಸಿಕೊಳ್ಳಬೇಕು. ಅಂಚೆ ಕಚೇರಿಯಲ್ಲಿ ಬ್ಯಾಂಕ್ ವ್ಯವಹಾರ ಸಹ ಮಾಡಬಹುದಾಗಿದೆ. ಅಂಚೆ ಕಚೇರಿ ಬಗ್ಗೆ ತಿಳಿದುಕೊಳ್ಳಬೇಕು.

ಕಡಿಮೆ ಬೆಲೆಯಲ್ಲಿ ದೊಡ್ಡ ಮಟ್ಟದ ಉಳಿತಾಯ ಮಾಡಬಹುದಾಗಿದೆ. ಅಲ್ಲದೆ ಉತ್ತಮ ರೀತಿಯ ಜೀವಾ ವಿಮೆ ಸೇವೆಗಳು ಸಹ ಇಲಾಖೆಯಿಂದ ಒದಗಿಸಲಾಗುತ್ತಿದ್ದು, ಸರ್ಕಾರದ ಪ್ರತಿಯೊಂದು ಯೋಜನೆ, ಸೌಲಭ್ಯಗಳನ್ನು ಚೆನ್ನಾಗಿ ಬಳಸಿಕೊಳ್ಳಬೇಕೆಂದರು. ಈ ವೇಳೆ ಎಂ.ಎಸ್. ಆಗ್ರಿ ವಿದ್ಯಾರ್ಥಿನಿಯಾದ ಅಂಕಿತಾ ಅವರು ಮಾತನಾಡಿ, ಉತ್ತಮ ಗುಣಮಟ್ಟದ ಸೇವೆಗಳನ್ನು ಅಂಚೆ ಇಲಾಖೆಯಿಂದ ನೀಡಲಾಗುತ್ತದೆ. ಇಲಾಖೆಗೆ ವಿದ್ಯಾರ್ಥಿಗಳ ಸಮೂಹದಿಂದ ಇಲಾಖೆಗೆ ಅಭಿನಂದನೆಗಳು ತಿಳಿಸಲು ಸಂತೋಷವಾಗುತ್ತಿದೆ ಎಂದರು. ಇದೇ ಸಂದರ್ಭದಲ್ಲಿ ರಾಯಚೂರು ವಿಭಾಗದ ಅಂಚೆ ಅಧೀಕ್ಷಕರಾದ ಶಿವಾನಂದ ಆರ್. ಎಚ್., ಕೃಷಿ ವಿಶ್ವವಿದ್ಯಾಲಯದ ರವಿಶಂಕರ್, ರಾಯಚೂರು ವಿಭಾಗದ ಅಂಚೆ ಇಲಾಖೆಯ ವಿಭಾಗೀಯ ಕಚೇರಿಯ ಕಚೇರಿ ಸಹಾಯಕ ಕಿರಣ್ ಕುಮಾರ್ ಜಿ., ಕಚೇರಿ ಸಹಾಯಕಿ ಹೀರಾಬಾಯಿ, ಸಹಾಯಕ ಅಂಚೆ ಅಧೀಕ್ಷಕರ ಪಿ ಚಿದಾನಂದ್, ಡಿ.ಎಂ.ಶರಣಪ್ಪ, ಅಂಚೆ ಇಲಾಖೆಯ ಶ್ರೀಪಾದ ಶಿವಂಗಿ ಸೇರಿದಂತೆ ಇತರರು ಇದ್ದರು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### ಕೃತಕ ಬುದ್ಧಿಮತ್ತೆ ಮತ್ತು ದತ್ತಾಂಶ ವಿಜ್ಞಾನ

ಕೃತಕ ಬುದ್ಧಿಮತ್ತೆ ಮತ್ತು ದತ್ತಾಂಶ ವಿಜ್ಞಾನ (Artificial Intelligence and Data Science - AI&DS) ಕೋರ್ಸ್ 4 ವರ್ಷಗಳ ಇಂಜಿನಿಯರಿಂಗ್ (B.E/B.Tech) ಪದವಿಯಾಗಿದ್ದು, ಮಿಷನ್ ಲರ್ನಿಂಗ್, ಡೇಟಾ ಅನಲಿಟಿಕ್ಸ್ ಮತ್ತು ಪ್ರೋಗ್ರಾಮಿಂಗ್ ಅನ್ನು ಒಳಗೊಂಡಿದೆ. ಇದು ಕಂಪ್ಯೂಟರ್ ಸೈನ್ಸ್‌ನ ಒಂದು ಮುಂದುವರಿದ ಭಾಗವಾಗಿದೆ, ಇದು ದತ್ತಾಂಶ ನಿರ್ವಹಣೆ ಮತ್ತು ಸ್ವಯಂಚಾಲಿತ ಕಲಿಕೆಯನ್ನು ಕೇಂದ್ರೀಕರಿಸುತ್ತದೆ. ಈ ಕ್ಷೇತ್ರದಲ್ಲಿ ಉದ್ಯೋಗಾವಕಾಶಗಳು ಹೆಚ್ಚಿದ್ದು, ಸಂಬಳವು ವಾರ್ಷಿಕ 6 ರಿಂದ 12 ಲಕ್ಷಗಳವರೆಗೆ (ಫ್ರೆಶರ್‌ಗಳಿಗೆ) ಇರಬಹುದು. ಕೋರ್ಸ್ ವಿವರಗಳು (Course Details) ಕೋರ್ಸ್ ಹೆಸರು: B.E./B.Tech in Artificial Intelligence and Data Science ಅವಧಿ: 4 ವರ್ಷಗಳು (8 ಸೆಮಿಸ್ಟರ್‌ಗಳು) ಅರ್ಹತೆ: 12ನೇ ತರಗತಿ (ವಿಜ್ಞಾನ – ಭೌತಶಾಸ್ತ್ರ, ರಸಾಯನಶಾಸ್ತ್ರ, ಗಣಿತ) ಅಥವಾ ಪಿಯುಸಿ. ಪ್ರಮುಖ ವಿಷಯಗಳು: ಪ್ರಮುಖ ಕೌಶಲ್ಯಗಳು (Key Skills) ಪ್ರೋಗ್ರಾಮಿಂಗ್: Python, R, SQL. AI ಪರಿಕಲ್ಪನೆಗಳು: ನ್ಯೂರಲ್ ನೆಟ್‌ವರ್ಕ್‌ಗಳು, ರೋಬೋಟಿಕ್ಸ್, ನ್ಯಾಚುರಲ್ ಲ್ಯಾಂಗ್ವೇಜ್ ಪ್ರೊಸೆಸಿಂಗ್ (NLP). ದತ್ತಾಂಶ ವಿಶ್ಲೇಷಣೆ: ಅಂಕಿಅಂಶಗಳು (Statistics) ಮತ್ತು ಸಾಧ್ಯತೆಗಳು (Probability). ಉದ್ಯೋಗಾವಕಾಶಗಳು (Career Opportunities) ಈ ಕೋರ್ಸ್ ಪೂರ್ಣಗೊಳಿಸಿದ ನಂತರ, ಈ ಕೆಳಗಿನ ಹುದ್ದೆಗಳಿಗೆ ಸೇರಬಹುದು: ಡೇಟಾ ಸೈಂಟಿಸ್ಟ್ (Data Scientist) AI/ML ಇಂಜಿನಿಯರ್ (AI/ML Engineer) ಡೇಟಾ ಅನಲಿಸ್ಟ್ (Data Analyst) ಬಿಗ್ ಡೇಟಾ ಇಂಜಿನಿಯರ್ (Big Data Engineer) ಕರ್ನಾಟಕದಲ್ಲಿ ಲಭ್ಯತೆ ಕರ್ನಾಟಕದ ಅನೇಕಂಖ & ML ಇಂಜಿನಿಯರಿಂಗ್‌ನಲ್ಲಿ ಉದ್ಯೋಗಾವಕಾಶಗಳು (Career Prospects) ಡೇಟಾದ ಪ್ರಮಾಣ ಮತ್ತು ಅದರ ಉಪಯೋಗಗಳಲ್ಲಿ ಉಂಟಾದ ಭಾರೀ ವೃದ್ಧಿಯ ಹಿನ್ನೆಲೆ, AI & ML ಕ್ಷೇತ್ರದಲ್ಲಿ ಉದ್ಯೋಗಾವಕಾಶಗಳು ಬಹಳ ಭರವಸೆಯುತವಾಗಿವೆ. ಬಿಗ್ ಡೇಟಾ ಎಂಜಿನಿಯರ್, ಬಿಸಿನೆಸ್ ಇಂಟೆಲಿಜೆನ್ಸ್ ಡೆವಲಪರ್, ಡೇಟಾ ಸೈಂಟಿಸ್ಟ್, ಮಷೀನ್ ಲರ್ನಿಂಗ್ ಎಂಜಿನಿಯರ್, ಸಂಶೋಧನಾ ವಿಜ್ಞಾನಿ, ೦ಖ ಡೇಟಾ ಅನಾಲಿಸ್ಟ್, ೦ಖ ಎಂಜಿನಿಯರ್, ರೋಬೋಟಿಕ್ಸ್ ವಿಜ್ಞಾನಿ ಮುಂತಾದ ಹುದ್ದೆಗಳಲ್ಲಿ ಕೆಲಸ ಮಾಡಲು ಅವಕಾಶವಿದೆ. Microsoft, Amazon, Goldman Sachs, Oracle GBU, Cisco, Dell Technologies, Accenture ಮುಂತಾದ ಪ್ರಸಿದ್ಧ ಸಂಸ್ಥೆಗಳು ವಿದ್ಯಾರ್ಥಿಗಳನ್ನು ನೇಮಕ ಮಾಡಿಕೊಂಡಿವೆ. ಐಟಿ ಕ್ಷೇತ್ರದಿಂದ ಹಿಡಿದು ಆರೋಗ್ಯ ಕ್ಷೇತ್ರದವರೆಗೆ ೦ಖ & ಒಐ ತನ್ನ ಮಹತ್ವವನ್ನು ಸಾಬೀತುಪಡಿಸಿದೆ. ಭವಿಷ್ಯದಲ್ಲಿ ಅನೇಕ ಹೊಸ ಅವಕಾಶಗಳು ಈ ಕ್ಷೇತ್ರದಲ್ಲಿ ಲಭ್ಯವಾಗಲಿವೆ. ಈ ವಿಭಾಗದ ಪದವೀಧರರು ದೇಶೀಯ ಮತ್ತು ಅಂತರರಾಷ್ಟ್ರೀಯ ಖ್ಯಾತಿಯ ವಿಶ್ವವಿದ್ಯಾಲಯಗಳಲ್ಲಿ ಉನ್ನತ ಶಿಕ್ಷಣ ಮತ್ತು ಸಂಶೋಧನೆ ಮುಂದುವರಿಸಬಹುದು. ಎಂಜಿನಿಯರಿಂಗ್ ಕಾಲೇಜುಗಳಲ್ಲಿ (ಉದಾಹರಣೆಗೆ CMRIT, SJCIT, GEC Naragund) ಈ ಕೋರ್ಸ್ ಲಭ್ಯವಿದೆ.

## ಸೌಮ್ಯಶ್ರೀ ಪೂಜಾರಿಗೆ ಪಿಎಚ್‌ಡಿ ಪದವಿ ಪ್ರದಾನ

**ನೈಜ್ಯ ದೆಸೆ ನ್ಯೂಸ್**

**ಬೆಳಗಾವಿ: ರಾಣಿ ಚನ್ನಮ್ಮ ವಿಶ್ವವಿದ್ಯಾಲಯವು ಸೌಮ್ಯಶ್ರೀ ಪೂಜಾರಿ ಅವರು ಭೂಗೋಳಶಾಸ್ತ್ರ ವಿಭಾಗಕ್ಕೆ ಸಲ್ಲಿಸಿದ "ಜಿಯೋಗ್ರಾಫಿಕಲ್ ಪರ್ಸ್ಪೆಕ್ಟಿವ್ ಆಫ್ ಇಂಟಿಗ್ರೇಟೆಡ್ ರೂರಲ್ ಏರಿಯಾ ಡೆವಲಪಮೆಂಟ್ ಇನ್ ಬೆಳಗಾವಿ ಡಿಸ್ಟ್ರಿಕ್ಟ್" ಎಂಬ ಮಹಾಪ್ರಬಂಧಕ್ಕೆ ಪಿಎಚ್‌ಡಿ ಪದವಿ ನೀಡಿದೆ.**



ಇವರು ಬೆಳಗಾವಿ ಜಿಲ್ಲೆಯ ಖಾನಾಪುರ ತಾಲೂಕಿನ ಇಟಗಿ ಗ್ರಾಮದ ನಿವಾಸಿಯಾಗಿದ್ದಾರೆ. ಇವರಿಗೆ, ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಭೂಗೋಳಶಾಸ್ತ್ರ ಅಧ್ಯಯನ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ. ಮಂಜುನಾಥ ಎನ್. ಕೆ. ಅವರು ಮಾರ್ಗದರ್ಶನ ಮಾಡಿದರು.

# ಏಪ್ರೀಲ್ ಮೊದಲ ವಾರದಲ್ಲಿ ರಾಯಚೂರು ಜಿಲ್ಲಾ ವ್ಯಾಪ್ತಿಯ ಎಲ್ಲ ಕೆರೆಗಳ ಭರ್ತಿಗೆ ಕ್ರಮವಹಿಸಬೇಕು

**ನೈಜ್ಯ ದೆಸೆ ನ್ಯೂಸ್**

**ರಾಯಚೂರು: ಮುಂಬರಲಿರುವ ಏಪ್ರೀಲ್ ಮೊದಲ ವಾರದಲ್ಲಿ ರಾಯಚೂರು ಜಿಲ್ಲೆಯ ಎಲ್ಲೆ ಕೆರೆಗಳನ್ನು ತುಂಬಿಸುವ ಕಾರ್ಯಕ್ಕೆ ಮೊದಲಾದ್ಯತೆ ನೀಡಬೇಕು ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಹೇಳಿದರು.**

ರಾಯಚೂರು ಜಿಲ್ಲೆಯಲ್ಲಿ ಮುಂಬರುವ ಬೇಸಿಗೆ ಸಮಯದಲ್ಲಿ ಕುಡಿಯುವ ನೀರಿನ ಸಮಸ್ಯೆ, ಇತ್ತೀಚೆಗೆ ಸುರಿದ ಆಲಿಕಲ್ ಮಳೆಯಿಂದಾದ ಬೆಳೆಹಾನಿ ಹಾಗೂ ಮೇವು ಲಭ್ಯತೆ ಕುರಿತು, ಜಿಲ್ಲಾಧಿಕಾರಿಗಳ ಕಚೇರಿಯ ಕೆಸ್ವಾನ್ ವಿಡಿಯೋ ಸಭಾಂಗಣದಲ್ಲಿ ಮಾರ್ಚ 24ರಂದು ಸಂಜೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ರಾಯಚೂರು ಜಿಲ್ಲೆಯಲ್ಲಿ ಸಿಂಧನೂರ ತಾಲೂಕಿನಲ್ಲಿ ಅತೀ ಹೆಚ್ಚು 155 ಕೆರೆಗಳಿದ್ದು ಈ ಎಲ್ಲ ಕೆರೆಗಳನ್ನು ಭರ್ತಿ ಮಾಡಬೇಕು. ಇನ್ನುಳಿದಂತೆ ರಾಯಚೂರು ತಾಲೂಕಿನಲ್ಲಿ 15, ಮಾನವಿ ತಾಲೂಕಿನಲ್ಲಿ 18, ಅರಕೇರಾ ತಾಲೂಕಿನಲ್ಲಿ 13, ಮಸ್ಕಿ ತಾಲೂಕಿನಲ್ಲಿ 24, ಸಿರವಾರ ತಾಲೂಕಿನಲ್ಲಿ 43 ಹಾಗೂ ಲಿಂಗಸೂರ ತಾಲೂಕಿನಲ್ಲಿ 2 ಕೆರೆಗಳಿದ್ದು ಈ ಎಲ್ಲ ಕೆರೆಗಳನ್ನು ಮುಂದಿನ ತಿಂಗಳು ಜಾಗ್ರತೆಯಿಂದ ತುಂಬಿಸಬೇಕು.

ಮಳೆಗಾಲದವರೆಗೆ ಮುಂದೆ ನೀರು ಸಿಗುವುದಿಲ್ಲ ಎಂದು ತಿಳಿಸಿದರು. ಆಯಾ ತಾಲೂಕಿನ ತಹಸೀಲ್ದಾರರು, ಕಾರ್ಯ ನಿರ್ವಾಹಕ ಅಧಿಕಾರಿಗಳು ಸಹಾಯಕ ಆಯುಕ್ತರ ಸಮ್ಮುಖದಲ್ಲಿ ಒಗ್ಗೂಡಿ ಅತ್ಯಂತ ಕಾಳಜಿಯಿಂದ ಕೆರೆಗಳನ್ನು ತುಂಬಿಸಬೇಕು. ಈಗೊಂದು ವೇಳೆ ಕೆರೆ ತುಂಬಿಸದಿದ್ದಲ್ಲಿ ಜನತೆಗೆ ತೊಂದರೆಯಾಗಲಿದೆ. ಮುಂದಿನ ಜುಲೈವರೆಗೆ ಮತ್ತೆ ನೀರು ಸಿಗುವುದಿಲ್ಲ. ಏಪ್ರೀಲ್, ಮೇ ಮತ್ತು ಜೂನ್ ಮಾಹೆಯಲ್ಲಿ ಯಾವುದೇ ರೀತಿಯಲ್ಲಿ ಜನತೆಗೆ ಕುಡಿಯುವ ನೀರಿಗೆ ತೊಂದರೆಯಾಗದ ಹಾಗೆ ವ್ಯವಸ್ಥೆಯಾಗಬೇಕು.



ಬರುವ ಏಪ್ರೀಲ್ ಮೊದಲನೇ ವಾರದಲ್ಲಿ ನೀರು ಹರಿಸಲಾಗುವುದು. ಈ ವೇಳೆ ಕೆರೆಗೆ ನೀರು ತುಂಬಿಸದೇ ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿ ಯಾವುದಾದರು ಗ್ರಾಮಸ್ಥರಿಗೆ ತೊಂದರೆಯಾದಲ್ಲಿ ಇದನ್ನು ಗಂಭೀರವಾಗಿ ಪರಿಗಣಿಸಲಾಗುವುದು.

ಕೆರೆಗಳಿಗೆ ನೀರು ತುಂಬಿಸದೇ ಬೇಜವಾಬ್ದಾರಿ ವಹಿಸಿರುವುದು ಗೊತ್ತಾದಲ್ಲಿ ವಿಪತ್ತು ನಿರ್ವಹಣಾ ಕಾಯ್ದೆಯನುಸಾರ ಶಿಸ್ತು ಕ್ರಮಕ್ಕೆ ಶಿಫಾರಸ್ಸು ಮಾಡಲಾಗುವುದು ಎಂದು ಸಹಾಯಕ ಆಯುಕ್ತರು, ಎಲ್ಲ ತಾಲೂಕಿನ ತಹಸೀಲ್ದಾರರು, ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು, ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆಯ ಅಧಿಕಾರಿಗಳು ಮತ್ತು ನೀರಾವರಿ ಇಲಾಖೆಯ ಅಧಿಕಾರಿಗಳು ಮತ್ತು ಇನ್ನೀತರ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಎಚ್ಚರಿಕೆ ನೀಡಿದರು. ಹಿಂದಿನ ವರ್ಷಕ್ಕೆ ಹೋಲಿಸಿದರೆ ಈ ವರ್ಷ ಬಿಸಿಲಿನ ತಾಪಮಾಣದ ಪ್ರಮಾಣ ಹೆಚ್ಚಾಗಿದೆ.

ಲಿಂಗಸೂರು, ದೇವದುರ್ಗ, ರಾಯಚೂರಲ್ಲಿ ಕುಡಿಯುವ ನೀರಿನ ಸಮಸ್ಯೆ ಹೆಚ್ಚಿರುವುದಾಗಿ ಕಂಡು ಬಂದಿದೆ. ಜಿಲ್ಲೆಯಲ್ಲಿ ಈಗಾಗಲೇ 35 ಹಳ್ಳಿಗಳನ್ನು ಸಮಸ್ಯಾತ್ಮಕ ಹಳ್ಳಿಗಳೆಂದು ಗುರುತಿಸಿದ್ದು ಈ ಸಂಖ್ಯೆ ಇನ್ನು ಹೆಚ್ಚಾಗುವ ಸಾಧ್ಯತೆ ಇದೆ. ಕಾಲುವೆಗಳಿಗೆ ನೀರು ಹರಿಸಲು ಇನ್ನು ಒಂದು ವಾರ ಸಮಯ ಇದ್ದು, ಅಷ್ಟರೊಳಗೆ ಸಹಾಯಕ ಆಯುಕ್ತರು, ಆಯಾ ತಾಲೂಕಿನ ಎಲ್ಲ ತಹಸೀಲ್ದಾರರು, ತಾಪಂ ಕಾರ್ಯನಿರ್ವಹಣಾಧಿಕಾರಿಗಳು ಎಲ್ಲ ಕಡೆಗೆ ಪ್ರವಾಸ ಕೈಗೊಂಡು ಖುದ್ದು ಭೇಟಿ ನೀಡಿ ನೀರಿನ ಸಮಸ್ಯೆ ಯಾವ ಕಡೆಗಿದೆ ಎಂಬುದನ್ನು ಗುರುತಿಸಿ ಅಲ್ಲಿ ನ್ಯಾಯ ವ್ಯವಸ್ಥೆಗೆ ಕ್ರಮವಹಿಸಬೇಕು. ಆಯಾ ಕಡೆಗಳಲ್ಲಿ ಕೆರೆಗಳ ನೀರಿನ ಸ್ಥಿತಿ ಹೇಗಿದೆ ಎಂಬುದರ ಬಗ್ಗೆ ವರದಿ ಸಿದ್ಧಪಡಿಸಿ ಎಲ್ಲ ಕೆರೆಗಳನ್ನು ಭರ್ತಿ ಮಾಡಲು ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಜಂಟಿ ಸಭೆಗೆ ಸೂಚನೆ: ಜಿಲ್ಲಾ ಉಸ್ತುವಾರಿ ಸಚಿವರು ಏಪ್ರೀಲ್ ಮೊದಲ ವಾರದಲ್ಲಿ ವಿಪತ್ತು ನಿರ್ವಹಣಾ ವಿಷಯದ ಬಗ್ಗೆ ಸಭೆ ನಡೆಸಲಿದ್ದಾರೆ. ಆ ಸಮಯದೊಳಗೆ ಕೆರೆಗಳ ಭರ್ತಿ ಸೇರಿದಂತೆ ಎಲ್ಲಾ ವ್ಯವಸ್ಥೆ ಮಾಡಬೇಕು. ಸಭೆಗೆ ಸರಿಯಾದ ಮಾಹಿತಿ ನೀಡಬೇಕು. ತಹಸೀಲ್ದಾರರು ಮತ್ತು ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು ಸಮನ್ವಯದಿಂದ ಕಾರ್ಯ ನಿರ್ವಹಿಸಬೇಕು. ಆಯಾ ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು ಎಲ್ಲ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳೊಂದಿಗೆ ಜಂಟಿ ಸಭೆ ನಡೆಸಿ ಕೆರೆಗಳ ಪರಿಸ್ಥಿತಿ, ನೀರಿನ ಸಮಸ್ಯೆ ಎದುರಿಸುವ ಹಳ್ಳಿಗಳ ವಿವರ ಸೇರಿದಂತೆ ಎಲ್ಲ ಮಾಹಿತಿಯನ್ನು ಸಂಗ್ರಹಿಸಬೇಕು ಎಂದು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು. ಸಿರವಾರ ತಾಲೂಕಿನ ತಹಸೀಲ್ದಾರರು ಮತ್ತು ಇಓಗಳು ಹೆಚ್ಚಿನ ಕಾಳಜಿಯಿಂದ ಕೆಲಸ ಮಾಡಬೇಕು. ಸಿರವಾರ ತಾಲೂಕಿನ ಎಲ್ಲ ಹಳ್ಳಿಗಳಿಗೆ ಬೋರವೆಲ್ ಮೂಲಕವೇ ನೀರು ಪೂರೈಕೆಯಾಗುತ್ತಿದೆ ಎಂಬುದರ ಬಗ್ಗೆ ಗಮನ ಹರಿಸಿ ನೀರು ಸಿಗದ ಗ್ರಾಮಗಳಲ್ಲಿ ಖಾಸಗಿ ಬೋರವೆಲ್‌ಗಳ ಮೂಲಕ ನೀರು ಸರಬರಾಜು ಕಾರ್ಯ ಆಗಬೇಕು ಎಂದು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಬೇಸಿಗೆ ಸಮಯದಲ್ಲಿ ಎಲ್ಲ ಅಧಿಕಾರಿಗಳು ಜಾಗೃತೆಯಿಂದ ಕಾರ್ಯನಿರ್ವಹಿಸಬೇಕು. ಕುಡಿಯುವ ನೀರಿಗೆ ಸಂಬಂಧಿಸಿದಂತೆ ಯಾವುದಾದರು ಹಳ್ಳಿಗಳಲ್ಲಿ ತೊಂದರೆ ಎದುರಾದರೆ ಅಧಿಕಾರಿಗಳು ಕೂಡಲೇ ಸ್ಥಳಕ್ಕೆ ದಾವಿಸಿ ಸ್ಪಂದಿಸಿ ಸಮಸ್ಯೆಯನ್ನು ತಮ್ಮ ಹಂತದಲ್ಲೇ ಇತ್ಯರ್ಥಪಡಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು. ನಿಯಮಿತ ಪರೀಕ್ಷೆ ನಡೆಸಿ: ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಈಶ್ವರ ಕಾಂದೂ ಅವರು ಮಾತನಾಡಿ, ಸಮಸ್ಯಾತ್ಮಕ ಹಳ್ಳಿಗಳಲ್ಲಿ ಖಾಸಗಿ ಬೋರವೆಲ್‌ಗಳನ್ನು ಗುರುತಿಸಿ ಕುಡಿಯುವ ನೀರು ಪೂರೈಕೆಗೆ ಅಗತ್ಯ ವ್ಯವಸ್ಥೆ ಮಾಡಬೇಕು.

ರಾಯಚೂರು ಮತ್ತು ಸಿಂಧನೂರ ನಗರಸಭೆ ವ್ಯಾಪ್ತಿಯಲ್ಲಿ ಮತ್ತು ಜಿಲ್ಲಾ ವ್ಯಾಪ್ತಿಯ ಎಲ್ಲ ಹಳ್ಳಗಳಲ್ಲಿ ಪರೀಕ್ಷಿಸಿದ ಬಳಿಕವೇ ಕುಡಿಯುವ ನೀರು ಪೂರೈಸಬೇಕು. ಕುಡಿಯುವ ನೀರಿನ ಪರೀಕ್ಷೆಯನ್ನು ನಿಯಮಿತವಾಗಿ ಮಾಡಬೇಕು ಎಂದು ಅವರು ನಿರ್ದೇಶನ ನೀಡಿದರು. ದೇವದುರ್ಗ, ಸಿರವಾರ ಮತ್ತು ಮಾನವಿಗಳಲ್ಲಿ ಟಾಸ್ಕಪೋರ್ಸ್ ಸಭೆಗೆ ಕೂಡಲೇ ವ್ಯವಸ್ಥೆ ಮಾಡಬೇಕು ಎಂದು ಸೂಚನೆ ನೀಡಿದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಭಜಂತ್ರಿ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಹಾಲಸಿದ್ದಪ್ಪ ಪೂಜಾರಿ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಂಧನೂರ, ಮಾನವಿ, ಮಸ್ಕಿ, ಲಿಂಗಸೂರು, ಅರಕೇರಾ, ಸಿರವಾರ, ದೇವದುರ್ಗ, ರಾಯಚೂರು ತಹಸೀಲ್ದಾರರು, ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು, ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ ಅಧಿಕಾರಿಗಳು ಇದ್ದರು.

# ಪಾಮನಕಲ್ಲೂರು: ಕೆಸರುಗದ್ದೆಯಾದ ಕಾನ್ಯಾಳ ರಸ್ತೆ; ಸಂಚರಿಸಲಾಗದೆ ಜನ ಹೈರಾಣ

## ಸಿಸಿ ರಸ್ತೆ ನಿರ್ಮಿಸಿ, ಸಮಸ್ಯೆ ಪರಿಹರಿಸಿ ಎಂದ ಸ್ಥಳೀಯರು



**ನೈಜ್ಯ ದೆಸೆ ನ್ಯೂಸ್**

**ರಾಯಚೂರು: ರಾಯಚೂರು ಜಿಲ್ಲೆಯ ಮಸ್ಕಿ ತಾಲೂಕಿನ ಪಾಮನಕಲ್ಲೂರು ಗ್ರಾಮದ ಹೊರವಲಯದಲ್ಲಿರುವ (ರಾಯಚೂರು–ಲಿಂಗಸುಗೂರು ಮುಖ್ಯ ರಸ್ತೆಯ ಬಲಭಾಗದಲ್ಲಿ) ಪರಿಶಿಷ್ಟ ಪಂಗಡದ ವಾಲ್ಮೀಕಿ ನಾಯಕ ಸಮುದಾಯದ ಜನರು ಹೆಚ್ಚಾಗಿ ವಾಸಿಸುತ್ತಿರುವ ಕಾನ್ಯಾಳ ಭಾಗಕ್ಕೆ ಸಂಪರ್ಕ ಕಲ್ಪಿಸುವ ರಸ್ತೆ ಮಳೆಯಿಂದಾಗಿ ಕೆಸರು ಗದ್ದೆಯಂತಾಗುತ್ತಿದ್ದು, ಆ ಭಾಗದಿಂದ ಶಾಲಾ ಕಾಲೇಜುಗಳಿಗೆ ತೆರಳುವ ಮಕ್ಕಳು, ದಿನನಿತ್ಯದ ವ್ಯವಹಾರಕ್ಕಾಗಿ ಪಾಮನಕಲ್ಲೂರು ಗ್ರಾಮಕ್ಕೆ ಸಂಚರಿಸುವ ಜನರು ಹೈರಾಣಾಗಿದ್ದಾರೆ.**

ಕಾನ್ಯಾಳ ಭಾಗದಿಂದ ದಿನನಿತ್ಯ 20ಕ್ಕೂ ಹೆಚ್ಚು ಮಕ್ಕಳು ಪಾಮನಕಲ್ಲೂರು ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ವಿದ್ಯಾಭ್ಯಾಸ ಮಾಡಲು ತೆರಳುತ್ತಾರೆ. ಅಷ್ಟೇ ಅಲ್ಲದೇ ಅನೇಕ ಜನ ವಿದ್ಯಾರ್ಥಿಗಳು ಪ್ರೌಢ ಶಾಲೆ, ಕಾಲೇಜುಗಳಿಗೆ ತೆರಳುತ್ತಾರೆ. ದಿನನಿತ್ಯ ನೂರಾರು ಜನರು ದಿನನಿತ್ಯದ ವ್ಯವಹಾರಕ್ಕಾಗಿ ಪಾಮನಕಲ್ಲೂರು ಗ್ರಾಮಕ್ಕೆ ಸಂಚರಿಸುತ್ತಾರೆ. ನಡೆದುಕೊಂಡು ಬರುವವರು, ದ್ವಿಚಕ್ರ ವಾಹನ ಸವಾರಿ ಮಾಡುವವರು ಸೇರಿದಂತೆ ಪ್ರತಿಯೊಬ್ಬರೂ ಇದೇ ರಸ್ತೆಯಲ್ಲೇ ಸಂಚರಿಸಬೇಕಾಗಿದೆ. ಆದರೆ ಮಳೆ ಬಂದಾಗಲೆಲ್ಲಾ ಈ ರಸ್ತೆ ಕೆಸರು ಗದ್ದೆಯಂತಾಗುತ್ತದೆ.

ನಡೆದುಕೊಂಡು ಹೋಗುವವರು ತಮ್ಮ ಚಪ್ಪಲಿಗಳನ್ನು ಕೈಯಲ್ಲಿಡಿದು ಬರಿಗಾಲಲ್ಲಿ ಸಾಗಬೇಕಾದ ಪರಿಸ್ಥಿತಿ ಮಳೆಗಾಲದಲ್ಲಿ ಎದುರಾಗುತ್ತದೆ. ನಮ್ಮ ರಸ್ತೆಯನ್ನು ಸರಿಪಡಿಸಿಕೊಡಿ, ನಮಗೆ ಶಾಶ್ವತ ಪರಿಹಾರ ನೀಡಿ, ಸಿಸಿ ರಸ್ತೆ ನಿರ್ಮಿಸಿಕೊಡಿ ಎಂದು ನಾವು ಈಗಾಗಲೇ ಸಾಕಷ್ಟು ಬಾರಿ ನಮ್ಮ ಭಾಗದ ಸಂಸದರಿಗೂ, ಶಾಸಕರಿಗೂ, ಜಿಲ್ಲಾ ಪಂಚಾಯತಿ, ತಾಲೂಕು ಪಂಚಾಯತಿ, ಗ್ರಾಮ ಪಂಚಾಯತಿ ಅಧಿಕಾರಿಗಳಿಗೂ ಮನವಿ ಮಾಡಿದ್ದೇವೆ. ಆದರೇ ಅವರು ಕಳೆದ ಕೆಲ ವರ್ಷಗಳ ಹಿಂದೆ ಮಣ್ಣು ಹಾಕಿ ರಸ್ತೆ ದುರಸ್ತಿ ಮಾಡಿದ್ದರು. ಆ ಬಳಿಕ ರಸ್ತೆ ಮತ್ತಷ್ಟು ಹದಗೆಟ್ಟಿದೆ ಎಂದು ಕಾನ್ಯಾಳ ಭಾಗದ ಜನರು ಆರೋಪಿಸಿದ್ದಾರೆ.

ಸ್ಥಳಕ್ಕೆ ಭೇಟಿ ನೀಡಿದ ಪಿಡಿಒ ಮಲ್ಲಯ್ಯ: ಆ ಭಾಗದ ಜನರ ಒತ್ತಾಯದ ಮೇರೆಗೆ ಕಾನ್ಯಾಳ ಭಾಗಕ್ಕೆ ಬುಧವಾರ ಮಧ್ಯಾಹ್ನದ ವೇಳೆಗೆ ಭೇಟಿ ನೀಡಿದ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮಲ್ಲಯ್ಯರವರು, ಕೆಸರು ಗದ್ದೆಯಂತಾದ ರಸ್ತೆಯಲ್ಲೇ ಸಂಚರಿಸಿ, ಪರಿಶೀಲನೆ ನಡೆಸಿದರು.

**ಮಳೆ ಬಂದರೆ ಸಾಕು ನಾವು ಚಪ್ಪಲಿ ಕೈಯಲಿಡಿದು ನಡೆದುಕೊಂಡು ಹೋಗುವ ಪರಿಸ್ಥಿತಿ ನಿರ್ಮಾಣವಾಗಿದೆ. ಚಪ್ಪಲಿ ಕಾಲಲ್ಲಿದ್ದರೆ ಕಿತ್ತು ಹೋಗುತ್ತವೆ. ಅಷ್ಟೇ ಅಲ್ಲದೇ ಹಾಕಿಕೊಂಡ ಬಟ್ಟೆಗಳ ಬಣ್ಣ ಬದಲಾಗುತ್ತದೆ. ನಮ್ಮ ಭಾಗದಿಂದ ಮಕ್ಕಳು, ಹಿರಿಯರು ಪಾಮನಕಲ್ಲೂರು ಗ್ರಾಮಕ್ಕೆ ದಿನನಿತ್ಯ ಓಡಾಟ ಮಾಡುತ್ತಿರುತ್ತೇವೆ. ಸಿಸಿ ರಸ್ತೆ ನಿರ್ಮಿಸಿಕೊಡುವವರೆಗೂ ನಮ್ಮ ಭಾಗದ ರಸ್ತೆ ಸಮಸ್ಯೆ ಪರಿಹಾರವಾಗದು. ನಮ್ಮ ಪರಿಸ್ಥಿತಿಯನ್ನು ಸಂಬಂಧಿಸಿದವರು ಅರ್ಥ ಮಾಡಿಕೊಳ್ಳಬೇಕು. ಅಯ್ಯಣ್ಣ ನಾಯಕ ಪಾಮನಕಲ್ಲೂರು, ಕಾನ್ಯಾಳ ಭಾಗದ ನಾಗರಿಕ**

**ಕಾನ್ಯಾಳ ಭಾಗಕ್ಕೆ ಸಿಸಿ ರಸ್ತೆ ನಿರ್ಮಿಸಿಕೊಡುವಂತೆ ನಾವು ಈಗಾಗಲೇ ಸಾಕಷ್ಟು ಭಾರಿ ಸಂಬಂಧಿಸಿದ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಮನವಿ ಮಾಡಿದ್ದವೆ. ಅಲ್ಲದೇ ಶಾಸಕರು, ಸಂಸದರಿಗೂ ನಮ್ಮ ಭಾಗದ ಯುವಕರು ಮನವಿ ಪತ್ರ ಸಲ್ಲಿಸಿದ್ದಾರೆ. ಆದರೇ ಇದುವರೆಗೂ ನಮ್ಮ ಮನವಿಗೆ ಫಲ ಸಿಕ್ಕಿಲ್ಲ. ಅಂಬಮ್ಮ ನಾಯಕ ಯದಲದೊಡ್ಡಿ, ಗ್ರಾಮ ಪಂಚಾಯತಿ ಸದಸ್ಯರು, ಪಾಮನಕಲ್ಲೂರು**



**ನಾನು ಗ್ರಾಮ ಪಂಚಾಯತಿ ಸದಸ್ಯನಾದಾಗಿನಿಂದ ಇಲ್ಲಿಯವರೆಗೂ ಅನೇಕ ಬಾರಿ ಕಾನ್ಯಾಳ ರಸ್ತೆಯ ಬಗ್ಗೆ ಸಂಬಂಧಿಸಿದ ಅಧಿಕಾರಿಗಳ ಗಮನಕ್ಕೆ ತರುವ ಪ್ರಾಮಾಣಿಕ ಪ್ರಯತ್ನ ಮಾಡಿದ್ದೆನೆ. ಆ ಭಾಗದ ಜನರೊಂದಿಗೆ ಸೇರಿ ಅನೇಕ ಬಾರಿ ತಾ.ಪಂ, ಜಿ.ಪಂ, ಗ್ರಾ.ಪಂ ಗಳಿಗೂ ಮನವಿ ಸಲ್ಲಿಸಿದ್ದೆವೆ. ಆದರೂ ಆ ಭಾಗದ ಜನರ ಸಮಸ್ಯೆಗೆ ಶಾಶ್ವತ ಪರಿಹಾರ ಸಿಗದಿರುವುದು ವಿಪರ್ಯಾಸವೇ ಸರಿ.**
**ಶ್ರೀನಿವಾಸ ಸಾನಬಾಳ,**
**ಗ್ರಾಮ ಪಂಚಾಯತಿ ಸದಸ್ಯರು,**
**ಪಾಮನಕಲ್ಲೂರು**

ನಿತ್ಯ ನರಕ ಅನುಭವಿಸುತ್ತಿರುವ ಪಾಮನಕಲ್ಲೂರು ಗ್ರಾಮ ಪಂಚಾಯತಿ ವ್ಯಾಪ್ತಿಯ ಕಾನ್ಯಾಳ ಭಾಗದ ಜನರ ಸಮಸ್ಯೆಗಳಿಗೆ ಸರ್ಕಾರ ಶಾಶ್ವತ ಪರಿಹಾರ ಕಲ್ಪಿಸಿಕೊಡಲಿ. ಆ ಭಾಗದ ಜನರ ನೋವಿಗೆ ಸಂಬಂಧಿಸಿದವರು ಸ್ಪಂದಿಸಲಿ ಎಂಬುದು ಈ ವರದಿಯ ಆಶಯವಾಗಿದೆ.

# ಹಾಸ್ಟೆಲ್, ಬಸ್ ನಿಲ್ದಾಣ, ಜಿಲ್ಲಾ ಕಾರಾಗೃಹ, ಪೊಲೀಸ್ ಠಾಣೆಗಳಿಗೆ ಭೇಟಿ; ಪರಿಶೀಲನೆ

**ನೈಜ್ಯ ದೆಸೆ ನ್ಯೂಸ್**

**ರಾಯಚೂರು: ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ಗೌರವಾನ್ವಿತ ಅಧ್ಯಕ್ಷರಾದ ಡಾ.ಟಿ.ಶ್ಯಾಮ್ ಭಟ್ ಹಾಗೂ ಸದಸ್ಯರಾದ ಎಸ್.ಕೆ ವಂಟಿಗೋಡಿ ಅವರು ಮಾರ್ಚ್ 25ರಂದು ರಾಯಚೂರು ನಗರಕ್ಕೆ ಆಗಮಿಸಿ ವಿವಿಧೆಡೆ ಮಿಂಚಿನ ಸಂಚಾರ ನಡೆಸಿದರು. ಬೆಳಗ್ಗೆ ಬೆಂಗಳೂರಿನಿಂದ ಹೊರಟು ಹೈದ್ರಾಬಾದ್ ಮೂಲಕ ಮಧ್ಯಾಹ್ನ ವೇಳೆಗೆ ರಾಯಚೂರ ನಗರಕ್ಕೆ ಆಮಿಸಿದ ಆಯೋಗವು, ಮಧ್ಯಾಹ್ನ ಊಟದ ವಿರಾಮದ ಬಳಿಕ ವಿವಿಧೆಡೆ ಭೇಟಿ ಆರಂಭಿಸಿತು.**

ಮೊದಲಿಗೆ ರಂಗಮಂದಿರ ಹತ್ತಿರದ ಡಾ.ಬಿ.ಆರ್. ಅಂಬೇಡ್ಕರ್ ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯಕ್ಕೆ ಭೇಟಿ ನೀಡಿದ ಅಧ್ಯಕ್ಷರು ಹಾಗೂ ಸದಸ್ಯರು, ವಸತಿ ನಿಲಯಗಳ ವಿದ್ಯಾರ್ಥಿಗಳೊಂದಿಗೆ ಮಾತನಾಡಿ ಅವರ ಅಹವಾಲು ಆಲಿಸಿದರು. ಸ್ನಾನಕ್ಕೆ ಬಿಸಿನೀರು ಸಿಗುತ್ತಾ? ಸೋಪುಕಿಟ್ ಕೊಡುತ್ತಾರಾ? ವೈದ್ಯರು ನಿಯಮಿತ ಭೇಟಿ ಕೊಡುತ್ತಾರಾ? ಸ್ಕೂಲ್ ಬಸ್ ಬರುತ್ತಾ? ಊಟ ಸರಿಯಾಗಿ ಕೊಡುತ್ತಾರಾ? ಸಿಸಿ ಟಿವಿ ಇದೆನಾ? ಎಂದು ಕೇಳಿ ಮಾಹಿತಿ ಪಡೆದುಕೊಂಡರು. ಸದ್ಯ ಒಂದು ಕೋಣೆಯಲ್ಲಿ ಐದಾರು, ಆರೇಳು



ಜನ ವಿದ್ಯಾರ್ಥಿನಿಯರಿದ್ದು, ಇಕ್ಕಟ್ಟಾಗಿವೆ.

ವಿದ್ಯಾರ್ಥಿಗಳ ಸಂಖ್ಯೆಗನುಸಾರ ರೂಮಿನ ವ್ಯವಸ್ಥೆಯಾಗಬೇಕಿದೆ ಎಂದು ಹಾಸ್ಟೆಲ್ ವಾರ್ಡನ್ ಅವರು ತಿಳಿಸಿದರು. ಸಂಬಳ ಸಿಗುತ್ತಾ? ರೇಷನ್ ಶುಚಿಯಾಗಿಡಿ. ಅಡುಗೆಗೆ ಶುದ್ಧ ನೀರು ಬಳಸಿ ಎಂದು ಅಡುಗೆದಾರರಿಗೆ ಸಲಹೆ ಮಾಡಿದರು. ಅಡುಗೆ ಸಾಮಗ್ರಿ ದಾಸ್ತಾನು ಕೊಠಡಿಗೆ ಭೇಟಿ ನೀಡಿ ಆಹಾರ ಧಾನ್ಯಗಳ ಗುಣಮಟ್ಟ ಪರಿಶೀಲಿಸಿದರು. ವಿದ್ಯಾರ್ಥಿಗಳಿಗೆ ನಿಯಮಿತವಾಗಿ ಆರೋಗ್ಯ ತಪಾಸಣೆ, ಜ್ಞಾನವೃದ್ಧಿ ಶಿಬಿರ ನಡೆಸಲು ಸಲಹೆ ಮಾಡಿದರು. ಬಳಿಕ ಕೇಂದ್ರ ಬಸ್ ನಿಲ್ದಾಣದ ಆವರಣಕ್ಕೆ ಭೇಟಿ ನೀಡಿದರು. ಬಸ್‌ಗಳು ಸರಿಯಾಗಿ ಬರುತ್ತಾ? ಮಧ್ಯೆ ಟ್ರಿಪ್ ನಿಲ್ಲಸ್ತಾರಾ? ಎಂದು ಪ್ರಯಾಣಿಕರಿಗೆ ಕೇಳಿದರು. ರಾಯಚೂರು–ಲಿಂಗಸೂರ ಮಧ್ಯೆ ಸರಿಯಾದ ಬಸ್ಸಿನ ಸೌಕರ್ಯ ಇಲ್ಲ. ಡಿಪೋಗಳಿಂದ ಬಸಗಳನ್ನು ಸರಿಯಾಗಿ ಬಿಡುತ್ತಿಲ್ಲ. ತಡೆರಹಿತ ಬಸ ಬಿಟ್ಟು ವಿದ್ಯಾರ್ಥಿಗಳ ಪಾಸಿಗೆ ಅವಕಾಶ ನೀಡುತ್ತಿಲ್ಲ.

ರಾಯಚೂರ–ಮಾನವಿ ಮಧ್ಯೆ ಸಾಕಷ್ಟು ಬಸಗಳು ಪ್ರತಿನಿತ್ಯ ಓಡಾಡಿದರು ನೀರಮಾನ್ವಿಯಂತ ಕಡೆಗೆ ನಿಲ್ಲುವುದಿಲ್ಲ. ಬರೀತಡೆ ರಹಿತ ಬಸ್ ಓಡಿಸುತ್ತಾರೆ ಎಂದು ಪ್ರಯಾಣಿಕರು ದೂರಿದರು. ಜಿಲ್ಲಾಧಿಕಾರಿಗಳೊಂದಿಗೆ ನಡೆಸುವ ಸಭೆಯಲ್ಲಿ ಈ ಬಗ್ಗೆ ಚರ್ಚಿಸುವುದಾಗಿ ಅಧ್ಯಕ್ಷರು ತಿಳಿಸಿದರು. ಬಸ್ ನಿಲ್ದಾಣದಲ್ಲಿನ ಬೇಕರಿ ಮತ್ತು ಇನ್ನೀತರರ ಅಂಗಡಿಗಳಲ್ಲಿನ ಸಾಮಗ್ರಿಗಳ ಮೇಲಿನ ಅವಧಿಯನ್ನು ಪರಿಶೀಲಿಸಿದರು.







ಬಳಿಕ ಜಿಲ್ಲಾ ಕಾರಾಗೃಹಕ್ಕೆ ಭೇಟಿ ನೀಡಿದರು. ಅಲ್ಲಿನ ಖೈದಿಗಳ ಸೆಲ್‌ಗಳಿಗೆ ಪ್ರವೇಶಿಸಿ, ಕೇಸಗಳು ಸರಿಯಾಗಿ ಆಗುತ್ತಾ? ವಕೀಲರು ಇಲ್ಲದೇ ಇರುವವರು ಇದ್ದೀರಾ? ಆರೋಗ್ಯ ತಪಾಸಣೆ ಮಾಡ್ತಾರಾ? ಹಾಸಿಗೆ ನೀಡಿದ್ದಾರಾ? ಎಂದು ಖೈದಿಗಳಿಗೆ ಕೇಳಿದರು.

ಪಾತ್ರೆ ತೊಳೆದು ಬಳಸಲು ಅಡುಗೆದಾರರಿಗೆ ತಿಳಿಸಿದರು. ಮಹಿಳಾ ಖೈದಿಗಳ ಸೆಲ್ ಗೆ ಭೇಟಿ ನೀಡಿ ಅವರ ಅಹವಾಲು ಆಲಿಸಿದರು. ಸಿಸಿ ಟಿವಿ ನಿರ್ವಹಣೆಗಳ ಬಗ್ಗೆ ಕೇಳಿದರು. ಜೈಲಿನ ಸಹಾಯಕ ಅಧೀಕ್ಷಕರಾದ ಅನಿತಾ ಎಸ್ ಹಿರೇಮನಿ ಅವರು ಜೈಲ್ ನಿರ್ವಹಣೆಯ ಬಗ್ಗೆ ಆಯೋಗಕ್ಕೆ ಮಾಹಿತಿ ನೀಡಿದರು. ಬಳಿಕ ನಗರದ ಸದರ ಬಜಾರ್ ಪೊಲೀಸ್ ಠಾಣೆಗೆ ಭೇಟಿ ನೀಡಿದರು. ಈ ವೇಳೆ ಠಾಣೆಯ ಕ್ರೈಮ ರಿಜಿಸ್ಟರ್, ಪಿಎಸ್ ಆರ್ ಪರಿಶೀಲಿಸಿದರು. ಇದೆ ವೇಳೆ, ಮಹಿಳಾ ಪೊಲೀಸ್ ಠಾಣೆಗೆ ಭೇಟಿ ನೀಡಿ ಮಕ್ಕಳ ಸ್ನೇಹಿ ಕೊಠಡಿ ವೀಕ್ಷಿಸಿ ವ್ಯಕ್ತಪಡಿಸಿದರು. ಈ ವೇಳೆ ನಗರಸಭೆ ಸಮಿತಿ ಕಾರ್ಯದರ್ಶಿ ಕೃಷ್ಣ ಶಾವಂತಗೇರಾ, ತಹಸೀಲ್ದಾರ ಸುರೇಶ ವರ್ಮಾ, ತಾಪಂ ಇಓ ಚಂದ್ರಶೇಖರ, ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ ಪ್ರವೀಣಕುಮಾರ ಹಾಗೂ ಇನ್ನೀತರರು ಇದ್ದರು.